ಸಂಪುಟ : 9 ಸಂಚಿಕೆ 179 ಪುಟ : 4 ಬೆಲೆ: 3.00 ಗುರುವಾರ ಆಗಸ್ಟ್ 22 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 179 Pages : 4 Price : 3.00 Thursday August 22 2024 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಅಮರಲಿಂಗ ಬಸವೇಶ್ವರ ಜಾತ್ರಾ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಸಮೀಪದ ಡ.ಸ. ಹಡಗಲಿ ಗ್ರಾಮದ ಶ್ರೀ ಅಮರಲಿಂಗ ಬಸವೇಶ್ವರ ಜಾತ್ರಾ ಮಹೋತ್ಸವವು ಆಗಸ್ಟ್ 22ರಿಂದ 27ರವರೆಗೆ ಜರುಗಲಿದೆ. ಆ. 22ರಂದು ಬೆಳಗ್ಗೆ 9 ಗಂಟೆಗೆ ಮಹಾರುದ್ರಾಭಿಷೇಕ, ಸಂಜೆ ಕಳಸಾರೋಹಣ ಹಾಗೂ ಪಾರ್ವತಿ-ಪರಮೇಶ್ವರ ವಿವಾಹ ಮಹೋತ್ಸವ ಜರುಗುವುದು.

ಆ.23ರಂದು ಬೆಳಿಗ್ಗೆ 10 ಗಂಟೆಗೆ ಗ್ರಾಮದ ಸಕಲ ದೇವತೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ. ಆ.24ರಂದು ಹನುಮಂತ ದೇವರಿಗೆ ಮಹಾಪೂಜೆ ಹಾಗೂ ಪಾಲಕಿ ಉತ್ಸವ ಜರುಗಲಿದೆ. ಆ.26ರ ಸಂಜೆ 6 ಗಂಟೆಗೆ ಮಹಾರಥೋತ್ಸವ, ಆ.27ರಂದು ಸಂಜೆ 6 ಗಂಟೆಗೆ ಕಡುಬಿನ ಕಾಳಗ ನಡೆಯುವುದರೊಂದಿಗೆ ಜಾತ್ರಾ ಮಹೋತ್ಸವಕ್ಕೆ ತೆರೆ ಬಿಳಲಿದೆ ಎಂದು ಜಾತ್ರಾ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 22ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 30, 34 ಹುಡ್ಕೋ ಕೆಲವು ಭಾಗಗಳು. ವಾರ್ಡ್ ನಂ. 30, 27 ಫಾರ್ಮ್ ಓಣಿ, ಕಾಶಿ ವಿಶ್ವನಾಥ ನಗರ, ದುರುಗಮ್ಮನ ಗುಡಿ, ಕಣವಿ, ಪಾಶಿಯವರ, ಸಂಕಣ್ಣವರ ಲೇಔಟ್, ಕೇಶವ ನಗರ.

ವಾರ್ಡ್ ನಂ. 19, 21, 22, 23, 25 ಜಂತ್ಲಿಯವರ ಲೈನ್, ಕುಂಬಾರ ಓಣಿ, ದ್ಯಾಮವ್ವನ ಕಟ್ಟಿ, ಗಂಜಿ ಬಸವೇಶ್ವರ ಸರ್ಕಲ್, ಪಡಗದ ಭಾಗ -1,2 ಚಿನ್ನೂರರ ಲೈನ್, ಕೆರೆಕಲಮಟ್ಟಿಯವರ ಲೈನ್, ಹಾಳದಿಬ್ಬ, ಸೋಮೇಶ್ವರ ಗುಡಿ ಲೈನ್, ಪಲ್ಲೆದವರ ಲೈನ್, ಕಲಬಂಡಿಯವರ ಲೈನ್, ಹನುಮಾನ ಗರಡಿ, ಸಿಟಿ ಹಾಲ್ ಭಾಗ-1,2 ಎರಡು ನಂ. ಶಾಲೆ.

ವಾರ್ಡ್ ನಂ. 12 ಇರಾನಿ ಕಾಲೋನಿ, ಚರ್ಚ್ ಗಾರ್ಡನ್ ಲೈನ್, ಹನುಮಂತ ದೇವರ ಗುಡಿ ಲೈನ್, ಕರಿಯಮ್ಮ ಕಲ್ಲು, ಗಣಪತಿಗುಡಿ. ವಾರ್ಡ್ ನಂ. 6, 5 ಕೋಟಿಯವರ, ಪಾಟೀಲ, ಸ್ವಾಮಿಯವರ, ಹನುಮಂತ ದೇವರ ಗುಡಿ ಲೈನ್‌ಗಳು, ಚನ್ನಪ್ಪ ಗೌಡ್ರ, ಖಾನಾಪುರ ಲೈನ್‌ಗಳು, ಹಳ್ಳಿಕೇರಿ ಪ್ಲಾಟ್ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 1 ಎಸ ಎಮ್ ಕೃಷ್ಣ ನಗರ ಮೇಲಿನ ಭಾಗ- ಕೆಳಗಿನ ಭಾಗ.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಪಾದಕರ ಸಂಘದ ನೂತನ ಜಿಲ್ಲಾಧ್ಯಕ್ಷರಾಗಿ ಜಗದೀಶ ಪೂಜಾರ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಕೆ. ಕಾರ್ಯಾಲಯದಲ್ಲಿ ಜರುಗಿದ ಕರ್ನಾಟಕ ಕಾರ್ಯನಿರತ ದಿನ ಪತ್ರಿಕೆಗಳ ಸಂಪಾದಕರ ಸಂಘದ ಗದಗ ಜಿಲ್ಲಾ ಘಟಕದ ಸಭೆ ಜರುಗಿತು.

ಸಭೆಯಲ್ಲಿ ಜಿಲ್ಲಾ ಘಟಕದ ನೂತನ ಅಧ್ಯಕ್ಷರನ್ನಾಗಿ ಜಗದೀಶ್ ಪೂಜಾರ್ ಅವರನ್ನು ಆಯ್ಕೆ ಮಾಡಲಾಯಿತು. ಜಗದೀಶ ಪೂಜಾರ ಅವರ ಹೆಸರನ್ನು ರವಿಕಾಂತ್ ಅಂಗಡಿ ಸೂಚಿಸಿದರೆ, ಎನ್ ಆರ್ ಬಾಂಡಗೆ ಅವರು ಅನುಮೋದಿಸಿದರು.

ಅಲ್ಲದೆ ಸಭೆಯಲ್ಲಿ ಸಂಘದ ಕಾರ್ಯಕ್ರಮಗಳ ಕುರಿತಂತೆ ಚರ್ಚೆ ನಡೆಸಲಾಯಿತು.

ಗದಗನಲ್ಲಿ ನಡೆಯಲಿರುವ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ " ಪ್ರಥಮ ಸಮ್ಮೇಳನ"ದ ಪೂರ್ವ ಸಿದ್ಧತೆಗಳ ಬಗ್ಗೆ, ಗದಗ ಜಿಲ್ಲಾ ಘಟಕದ ಬಲವರ್ಧನೆ ಕುರಿತು ಚರ್ಚೆ ನಡೆಸಲಾಯಿತು.

ರಾಜ್ಯ ಉಪಾಧ್ಯಕ್ಷರಾದ ಮಂಜುನಾಥ್ ಅಬ್ಬಿಗೇರಿ ಅವರು ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಉಪಾಧ್ಯಕ್ಷರು ಸೇರಿದಂತೆ ಸರ್ವ ಸದಸ್ಯರು ಭಾಗವಹಿಸಿದ್ದರು ಎಂದು ಪ್ರಧಾನ ಕಾರ್ಯದರ್ಶಿ ದೇವಪ್ಪ ಎನ್. ಲಿಂಗದಾಳ್ ತಿಳಿಸಿದ್ದಾರೆ.

ತೀವ್ರ ಕುತೂಹಲಕ್ಕೆ ಕಾರಣವಾಗಿದ್ದ 2ನೇ ಅವಧಿಯ ಚುನಾವಣೆ । ಲಕ್ಷ್ಮೇಶ್ವರ ಪುರಸಭೆ ಕಾಂಗ್ರೆಸ್ ಮಡಿಲಿಗೆ

ಹೊಂದಾಣಿಕೆ ರಾಜಕಾರಣಕ್ಕೆ ಅಂತಿಮ ತೆರೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಬೆಂಬಲಿತ ಯಲ್ಲವ್ವ ಗಂಗಪ್ಪ ದುರಗಣ್ಣವರ ಅಧ್ಯಕ್ಷೆಯಾಗಿ, ಕಾಂಗ್ರೆಸ್ ಪಕ್ಷದ ಸದಸ್ಯ ಫಿರ್ಧೋಸ್ ಆಡೂರ ಉಪಾಧ್ಯಕ್ಷರಾಗಿ ಆಯ್ಕೆಯಾದರು.

ತೀವ್ರ ಕುತೂಹಲಕ್ಕೆ ಕಾರಣವಾದ 2ನೇ ಅವಧಿಯ ಚುನಾವಣೆಗೆ ಅಧ್ಯಕ್ಷ ಸ್ಥಾನ ಹಿಂದುಳಿದ ವರ್ಗ(ಅ) ಮಹಿಳೆ ಹಾಗೂ ಉಪಾಧ್ಯಕ್ಷ ಸಾಮಾನ್ಯ ವರ್ಗಕ್ಕೆ ಮೀಸಲಾಗಿತ್ತು. ಒಟ್ಟು 23 ಸದಸ್ಯರ ಬಲ ಹೊಂದಿರುವ ಪುರಸಭೆಗೆ ಕಾಂಗ್ರೆಸ್ 9, ಬಿಜೆಪಿ 7, ಜೆಡಿಎಸ್ 2 ಹಾಗೂ 5 ಜನ ಪಕ್ಷೇತರ ಸದಸ್ಯರು ಆಯ್ಕೆಯಾಗಿದ್ದರು. ಬಿಜೆಪಿ ಸದಸ್ಯೆ ನಿಧನ ಹೊಂದಿದ್ದರಿಂದ ಬಿಜೆಪಿ ಸದಸ್ಯರ ಸಂಖ್ಯೆ 6ಕ್ಕೆ ಕುಸಿದಿತ್ತು.

ಅಧ್ಯಕ್ಷ ಸ್ಥಾನಕ್ಕೆ ಬಿಜೆಪಿ ಸದಸ್ಯೆ ಯಲ್ಲವ್ವ ದುರಗಣ್ಣವರ ಅಪರೇಷನ್ ಹಸ್ತಕ್ಕೊಳಗಾಗಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಮತ್ತು ಬಿಜೆಪಿ ಪಕ್ಷದಿಂದ ಕವಿತಾ ಗೋವಿಂದಪ್ಪ ಶರಸೂರಿ ನಾಮಪತ್ರ ಸಲ್ಲಿಸಿದ್ದರು. ಉಪಾಧ್ಯಕ್ಷ ಸ್ಥಾನಕ್ಕೆ ಅಪರೇಷನ್ ಕಮಲಕ್ಕೊಳಗಾಗಿ ಕಾಂಗ್ರೆಸ್ ಸದಸ್ಯ ಮಹದೇವಪ್ಪ ಅಣ್ಣಿಗೇರಿ, ಕಾಂಗ್ರೆಸ್ ಸದಸ್ಯ ಫಿರ್ಧೋಸ್ ಆಡೂರ ನಾಮಪತ್ರ ಸಲ್ಲಿಸಿದ್ದರು.

ಚುನಾವಣೆ ಪ್ರಕ್ರಿಯೆ ನಡೆದು ಯಲ್ಲವ್ವ ದುರಗಣ್ಣವರ ಅವರು ಕಾಂಗ್ರೆಸ್‌ನ 8, ಪಕ್ಷೇತರ 3, ಜೆಡಿಎಸ್‌ನ ಓರ್ವ ಸದಸ್ಯರು ಸೇರಿ ಒಟ್ಟು 13 ಮತಗಳನ್ನು ಪಡೆಯುವ ಮೂಲಕ ಅಧ್ಯಕ್ಷರಾಗಿ ಆಯ್ಕೆಯಾದರು. ಕಾಂಗ್ರೆಸ್ ಸದಸ್ಯ ಫಿರ್ಧೋಸ್

ಆಡೂರ 13 ಸದಸ್ಯರ ಬೆಂಬಲದಿಂದ ಉಪಾಧ್ಯಕ್ಷರಾಗಿ ಆಯ್ಕೆಯಾದರು.

ಬಿಜೆಪಿ ಪಕ್ಷದಿಂದ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಕವಿತಾ ಗೋವಿಂದಪ್ಪ ಶರಸೂರಿ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಮಹಾದೇವಪ್ಪ ಅಣ್ಣಿಗೇರಿ ಬಿಜೆಪಿಯ-5, ಜೆಡಿಸ್-1, ಪಕ್ಷೇತರರ-2, ಕಾಂಗ್ರೆಸ್ ಮತ್ತು ಶಾಸಕ ಡಾ.ಚಂದ್ರು ಲಮಾಣಿ ಚುನಾವಣೆ ರಣತಂತ್ರ ಹೆಣೆದು ತಮ್ಮ ಮತ ಚಲಾಯಿಸಿದರೂ ಕೇವಲ 10 ಮತ ಗಳಿಸಲಷ್ಟೇ ಶಕ್ತರಾದರು. ಚುನಾವಣಾಧಿಕಾರಿಯಾಗಿದ್ದ ತಹಸೀಲ್ದಾರ ವಾಸುದೇವ ಸ್ವಾಮಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿದರು. ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಉಪಸ್ಥಿತರಿದ್ದರು.

ಕೇಂದ್ರದಲ್ಲಿ ಹಾಗೂ ರಾಜ್ಯದಲ್ಲಿ ಬಿಜೆಪಿ-ಜೆಡಿಎಸ್ ಹೊಂದಾಣಿಕೆಯ ರಾಜಕಾರಣ ಮಾಡುತ್ತಿದ್ದರೂ ಲಕ್ಷ್ಮೇಶ್ವರ ಪುರಸಭೆಯಲ್ಲಿದ್ದ 2 ಸದಸ್ಯರು ಚುನಾವಣೆಯಲ್ಲಿ ಓರ್ವ ಸದಸ್ಯ ಪ್ರವೀಣ ಬಾಳಿಕಾಯಿ ಬಿಜೆಪಿಗೆ ಬೆಂಬಲ ನೀಡಿದರೆ ಇನ್ನೋರ್ವ ಸದಸ್ಯ ಮುಸ್ತಾಕ್ ಅಹ್ಮದ ಶಿರಹಟ್ಟಿ ಕಾಂಗ್ರೆಸ್‌ಗೆ ಬೆಂಬಲ ನೀಡಿದರು.

ಅಧ್ಯಕ್ಷ-ಉಪಾಧ್ಯಕ್ಷ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ವಿಜಯ ಸಾಧಿಸುತ್ತಿದ್ದಂತೆಯೇ ಪುರಸಭೆಯೆದುರು ಸೇರಿದ್ದ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ, ಬಣ್ಣ ಹಚ್ಚಿ ವಿಜಯೋತ್ಸವ ಆಚರಿಸಿದರು. ಈ ವೇಳೆ ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಕೆಪಿಸಿಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಗುರುನಾಥ ದಾನಪ್ಪನವರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ, ವಿ.ಜಿ. ಪಡಗೇರಿ, ಸೋಮಣ್ಣ ಬೆಟಗೇರಿ ಮುಂತಾದವರು ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ದೊರಕಿರುವದಕ್ಕೆ ಸಂತಸ ವ್ಯಕ್ತಪಡಿಸಿ ಮಾತನಾಡಿದರು.

ಮುಖಂಡರಾದ ಕೋಟೆಪ್ಪ ವರ್ದಿ, ಬಸವರಾಜ ಹೊಳಲಾಪೂರ, ಪದ್ಮರಾಜ ಪಾಟೀಲ, ಅಮರೇಶ ತೆಂಬದಮನಿ, ರಾಮು ಅಡಗಿಮನಿ, ವಿರೇಂದ್ರಗೌಡ ಪಾಟೀಲ, ನೀಲಪ್ಪ ಶರಸೂರಿ, ಅಮರಪ್ಪ ಗುಡಗುಂಟಿ, ದಾದಾಪೀರ ಮುಚ್ಚಾಲೆ, ಶರಣು ಗೋಡಿ, ಕಿರಣ ನವಲೆ, ಸದಾನಂದ ನಂದೆಣ್ಣವರ, ಮುದಕಪ್ಪ ಗದ್ದಿ, ನೀಲಪ್ಪ ಪೂಜಾರ, ಮಂಜಪ್ಪ ಶರಸೂರಿ, ಸಂತೋಷ ಕುರಿ, ಪರಮೇಶ ಲಮಾಣಿ, ಬಸವಣ್ಣೆಪ್ಪ ನಂದೆಣ್ಣವರ ಸೇರಿ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

> ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದ್ದು, ಮಾಜಿ ಶಾಸಕರ ಹಾಗೂ ಹಿರಿಯರ ಮಾರ್ಗದರ್ಶನ-ಸಹಕಾರದಿಂದ ಹೆಚ್ಚಿನ ಅನುದಾನ ತರುವ ಮೂಲಕ, ಸರ್ವ ಸದಸ್ಯರ ವಿಶ್ವಾಸ ಪಡೆದು ಲಕ್ಷ್ಮೇಶ್ವರ ಪಟ್ಟಣದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಾಗುವುದು.
>
> – ಯಲ್ಲವ್ವ ದುರಗಣ್ಣವರ.
> ನೂತನ ಅಧ್ಯಕ್ಷೆ.

> ಚುನಾವಣೆ ನಂತರದಲ್ಲಿ ಸರ್ವರಿಗೂ ಸಮಬಾಳು-ಸರ್ವರಿಗೂ ಸಮಪಾಲು ಎಂಬ ತತ್ವದಡಿ ಕಳೆದ ಹಲವು ವರ್ಷಗಳಿಂದ ಲಕ್ಷ್ಮೇಶ್ವರ ಪುರಸಭೆಯಲ್ಲಿ ನಡೆಸುತ್ತಾ ಬಂದಿದ್ದ ಪಕ್ಷಾತೀತ/ ಹೊಂದಾಣಿಕೆ ರಾಜಕಾರಣಕ್ಕೆ ತೆರೆ ಬಿದ್ದಿತು ಎಂಬ ಮಾತುಗಳು ಸಾರ್ವಜನಿಕರ ವಲಯದಲ್ಲಿ ಕೇಳಿ ಬಂದವು.

ಕಾಂಗ್ರೆಸ್ ಮುಖಂಡರಿಂದ ರಾಜ್ಯಪಾಲರ ವಿರುದ್ಧ ಅವಹೇಳನಕಾರಿ ಹೇಳಿಕೆಗೆ ಬಿಜೆಪಿ ಖಂಡನೆ

ರಾಜ್ಯದಲ್ಲಿ ರಾಷ್ಟ್ರಪತಿ ಆಡಳಿತ ಜಾರಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ರಾಜ್ಯಪಾಲರ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡಿ, ಪ್ರತಿಭಟನೆ ನಡೆಸುತ್ತ ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ಕ್ರಮ ಕೈಗೊಂಡು, ರಾಜ್ಯದಲ್ಲಿ ಕೂಡಲೇ ರಾಷ್ಟ್ರಪತಿ ಆಡಳಿತವನ್ನು ಜಾರಿಗೊಳಿಸಬೇಕೆಂದು ಒತ್ತಾಯಿಸಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಪ್ರತಿಭಟನೆ ನಡೆಸಿ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ರಾಜ್ಯಪಾಲರು ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ವಿರುದ್ಧ ಮುಡಾ ಹಗರಣದ ತನಿಖೆಗೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ವಿರೋಧಿಸಿ ಕರ್ನಾಟಕ ವಿಧಾನ ಪರಿಷತ್‌ನ ಸದಸ್ಯರು ಹಾಗೂ ಕಾಂಗ್ರೆಸ್ ನಾಯಕರಾದ ಐವಾನ್ ಡಿಸೋಜ ಮಂಗಳೂರಿನಲ್ಲಿ ತಮ್ಮ ಪಕ್ಷದ ಕಾರ್ಯಕರ್ತರ ಜೊತೆ ಪ್ರತಿಭಟನೆಯಲ್ಲಿ ಪಾಲ್ಗೊಂಡು ರಾಜ್ಯಪಾಲರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲು ಆಗ್ರಹಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಜಿಲ್ಲಾ ಪ್ರಧಾನ

ಕಾರ್ಯದರ್ಶಿ ಲಿಂಗರಾಜ ಪಾಟೀಲ, ಪಕ್ಷದ ಹಿರಿಯರಾದ ಎಂ.ಎಸ್. ಕರಿಗೌಡ್ರ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಕ್ಕಿರೇಶ ರಟ್ಟಿಹಳ್ಳಿ, ವಿಜಯಕುಮಾರ ಗಡ್ಡಿ, ಶ್ರೀಪತಿ ಉಡುಪಿ, ಸಿದ್ದು ಪಲ್ಲೇದ, ಎಂ.ಎಂ. ಹಿರೇಮಠ, ಬಿ.ಎಸ್. ಚಿಂಚಲಿ, ಸಂತೋಷ ಅಕ್ಕಿ, ರಾಘವೇಂದ್ರ ಯಳವತ್ತಿ, ವಿನಾಯಕ ಮಾನ್ವಿ, ಚಂದ್ರು ತಡಸದ, ಶಿವಕುಮಾರ ನೀಲಗುಂದ, ಅಶೋಕ ಕರೂರ, ಲಕ್ಷ್ಮಣ ದೊಡ್ಮನಿ, ಬೂದಪ್ಪ ಹಳ್ಳಿ, ಅಶ್ವಿನಿ ಜಗತಾಪ್, ನಿರ್ಮಲಾ ಕೊಳ್ಳಿ, ಲಕ್ಷ್ಮೀ ಕಾಕಿ, ವಿದ್ಯಾವತಿ ಗಡಗಿ, ಸ್ವಾತಿ ಅಕ್ಕಿ, ವಂದನಾ ವರ್ಣೇಕರ್, ಶಂಕರ ಕಾಕಿ, ಅಮರನಾಥ ಗಡಗಿ, ನಾಗರಾಜ ತಳವಾರ, ವಾಯ್.ಪಿ. ಅಡ್ಡೂರ, ಮಹದೇವಪ್ಪ ಚಿಂಚಲಿ, ನಾಗರಾಜ ಕುಲಕರ್ಣಿ, ಮಹೇಶ ದಾಸರ, ರೇಖಾ ಬಂಗಾರಶೆಟ್ಟರ, ಯೋಗೇಶ್ವರಿ ಭಾವಿಕಟ್ಟಿ, ಜಯಶ್ರೀ ಅಣ್ಣಿಗೇರಿ, ಕಮಲಾಕ್ಷಿ ಗೊಂದಿ, ಶಶಿಧರ ದಿಂಡೂರ, ರಮೇಶ ಸಜ್ಜಗಾರ, ಶಿವು ಹಿರೇಮನಿಪಾಟೀಲ, ಮಂಜುನಾಥ ಶಾಂತಗೇರಿ, ಶರಣ ಪಾಟೀಲ, ಸುರೇಶ ಚಿತ್ತರಗಿ, ಈಶ್ವಾದ ಮಾನ್ವಿ, ಸುರೇಶ ಗುರಮ್ಮನವರ, ಮಾಂತೇಶ ಬಾತಾಖಾನಿ, ಗಂಗಾಧರ ಹಬೀಬ, ನವೀನ ಕೊಟೆಕಲ್, ಕಿರಣ ಕಲಾಲ, ಮುತ್ತಣ್ಣ ಮೂಲಿಮನಿ, ರಾಜು ಹೊಂಗಲ, ಕಾರ್ತಿಕ ಮುತ್ತಿನಪೆಂಡಿಮಠ, ಗಂಗಾಧರ ಮೇಲಗಿರಿ, ಅವಿನಾಶ, ಕಾರ್ತಿಕ ಶಿಗ್ಲಿಮಠ, ದೇವಪ್ಪ ಹೂಗಾರ, ಅಪ್ಪಣ್ಣ ಟೆಂಗಿನಕಾಯಿ, ಶಂಕರ ಕರಿಬಿಷ್ಟಿ, ಪ್ರಕಾಶ ಅಂಗಡಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

> ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡಿಸುವ ದುರುದ್ದೇಶದಿಂದ ತಮ್ಮ ಕಾರ್ಯಕರ್ತರಿಗೆ ಪ್ರಚೋದನಾತ್ಮಕ ಹೇಳಿಕೆಗಳನ್ನು ನೀಡಿದ್ದಾರೆ. ಅಲ್ಲದೆ, ರಾಜ್ಯ ಸಚಿವ ಸಂಪುಟ ಸದಸ್ಯರಾದ ಜಮೀರಅಹ್ಮದ ಕೂಡ ಪ್ರಚೋದನಾತ್ಮಕ ಹೇಳಿಕೆ ನೀಡಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ನರಗುಂದ ಜೆಎಂಎಫ್‌ಸಿ ನ್ಯಾಯಾಲಯದಿಂದ ಮಹತ್ವದ ತೀರ್ಪು

ರೈತರ ವಿರುದ್ಧದ ಪ್ರಕರಣ ಸುಖಾಂತ್ಯ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಮಹದಾಯಿ ಮತ್ತು ಕಳಸಾ ಬಂಡೂರಿ ಹೋರಾಟಗಾರರು ಪ್ರತಿಭಟನೆಯ ಸಂದರ್ಭದಲ್ಲಿ ಪೊಲೀಸರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ ಆರೋಪದ ಮೇರೆಗೆ ರೈತರ ಮೇಲೆ ದಾಖಲಾಗಿದ್ದ ಪ್ರಕರಣ 8 ವರ್ಷದ ವಿಚಾರಣೆ ಬಳಿಕ ಅಂತ್ಯಗೊಂಡಿದೆ. ರೈತ ಹೋರಾಟಗಾರರು ನಿರಪರಾಧಿಗಳೆಂದು ನ್ಯಾಯಾಲಯ ತೀರ್ಪು ಹೊರಡಿಸಿದೆ.

ಬುಧವಾರ ಇಲ್ಲಿನ ಜೆಎಂಎಫ್ ಸಿ ನ್ಯಾಯಾಲಯ ಈ ಪ್ರಕರಣದ ಕುರಿತು ಅಂತಿಮ ಆದೇಶ ನೀಡಿದ್ದು, ಆರೋಪಿಗಳೆಲ್ಲರೂ ಸಾರ್ವಜನಿಕ ಹೋರಾಟಗಾರರು ಎಂದು ನ್ಯಾಯಾಧೀಶ ಜೀನಪ್ಪ ಚೌಗಲಾ ಅವರಿದ್ದ ಪೀಠ ತೀರ್ಪು ನೀಡಿತು.

2017ರಲ್ಲಿ ಕಳಸಾ ಬಂಡೂರಿ, ಮಹದಾಯಿ ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿತ್ತು. ರೈತರ ಹೋರಾಟಕ್ಕೆ ಕೇಂದ್ರ ಮತ್ತು ರಾಜ್ಯ ಸರಕಾರ ಸ್ಪಂದಿಸದೆ ಇದ್ದಾಗ, ಮಲಪ್ರಭಾ

ನದಿಯ ಅಚ್ಚುಕಟ್ಟು ಪ್ರದೇಶದ ರೈತರು ಪಟ್ಟಣದ ಎಪಿಎಂಸಿ ಆವರಣದಲ್ಲಿರುವ ಎ.ಪಿ. ಪಾಟೀಲ ಅವರ ಗೋದಾಮಿನಲ್ಲಿ ಸಭೆ ಸೇರಿದ್ದರು. ಹುಬ್ಬಳ್ಳಿಯಲ್ಲಿ ರೈಲು ತಡೆ ನಡೆಸಿ, ಸರಕಾರದ ಗಮನ ಸೆಳೆಯಲು ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯುತ್ತಿತ್ತು. ಈ ವೇಳೆ ಪೊಲೀಸ್

ಸಂಪಾದಕೀಯ

ಕುಮಾರಸ್ವಾಮಿ ವಿಷಯದಲ್ಲಿ ಮೌನಕ್ಕೆ ಜಾರಿದ ಬಿಜೆಪಿ

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡುತ್ತಿದ್ದಂತೆ ರಾಜಕೀಯ ಸಂಘರ್ಷ ತಾರಕ-ಕ್ಕೆ ಏರಿದೆ. ರಾಜ್ಯಪಾಲರ ನಡೆಯನ್ನು ಖಂಡಿಸಿ ಕಾಂಗ್ರೆಸ್ ಈಗಾಗಲೇ ಪ್ರತಿಭಟನೆಯನ್ನು ದಾಖಲಿಸಿದೆ.

ಸದ್ಯ ರಾಜ್ಯಪಾಲರ ನಡೆ ವಿಷಯವಾಗಿ ಕಾಂಗ್ರೆಸ್ ಮತ್ತು ಬಿಜೆಪಿ ಮಧ್ಯೆ ಸಂಘರ್ಷ ಶುರುವಾಗಿರುವ ಬೆನ್ನಲ್ಲೆ, ಮಾಜಿ ಸಿಎಂ ಹಾಗೂ ಕೇಂದ್ರ ಸಚಿವ ಎಚ್ .ಡಿ. ಕುಮಾರಸ್ವಾಮಿ ವಿರುದ್ಧ ಗಣಿ ಹಗರಣದ ಕುರಿತಂತೆ ಎಸ್ ಐಟಿ ರಾಜ್ಯಪಾಲರಿಂದ ತನಿಖೆಗೆ ಆದೇಶ ಕೇಳಿರುವುದು ಸಂಚಲನ ಸೃಷ್ಟಿಸಿದೆ.

ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಸಾಯಿ ವೆಂಕಟೇಶ್ವರ ಕಂಪನಿಗೆ ಜಾಗ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್ ಐಟಿ ರಾಜ್ಯಪಾಲರಿಂದ ಪ್ರಾಸಿಕ್ಯೂಷನ್‌ಗೆ ಅನುಮತಿ ಕೇಳಿದ್ದಾರೆ. ಈ ವಿಷಯ ಹೊರಬೀಳುತ್ತಿದ್ದಂತೆ ಸಿದ್ದರಾಮಯ್ಯ ಮೇಲೆ ಕೇಂದ್ರಿತವಾಗಿದ್ದ ಗಮನ ಈಗ ಕುಮಾರಸ್ವಾಮಿಯತ್ತ ಹೊರಳಿದೆ.

ಮುಡಾ ಹಗರಣ ಮುಂದಿಟ್ಟುಕೊಂಡು ಸಿದ್ದರಾಮಯ್ಯ ಮೇಲೆ ಮುಗಿಬೀಳುತ್ತಿದ್ದ ಬಿಜೆಪಿ ನಾಯಕರು, ಯಾವಾಗ ಕುಮಾರಸ್ವಾಮಿ ಕುರಿತಾದ ಹಗರಣದ ವಿಷಯ ಮುನ್ನಲೆಗೆ ಬರುತ್ತಿದ್ದಂತೆ ಮೌನಕ್ಕೆ ಜಾರಿದ್ದಾರೆ. ತಮ್ಮ ವಿರುದ್ಧದ ಆರೋಪಗಳಿಗೆ ಕುಮಾರಸ್ವಾಮಿ ಪ್ರತಿಕ್ರಿಯೆ ನೀಡಿದ್ದಾರೆ. ಇದೊಂದು ರಾಜಕೀಯ ಷಡ್ಯಂತ್ರ. ನನ್ನ ಅವಧಿಯಲ್ಲಿ ಒಂದು ಸೂಜಿ ಮೊನೆಯಷ್ಟು ಜಾಗವನ್ನು ಕೊಟ್ಟಿಲ್ಲ ಎಂದು ಸಮಜಾಯಿಷಿ ಕೊಟ್ಟಿದ್ದಾರೆ. ಜೊತೆಗೆ ಈ ಆರೋಪದ ವಿರುದ್ಧ ಕಾನೂನು ಹೋರಾಟ ಮಾಡುವುದಾಗಿಯೂ ತಿಳಿಸಿದ್ದಾರೆ.

ಆದರೆ ಕುಮಾರಸ್ವಾಮಿ ವಿರುದ್ಧದ ಆರೋಪಗಳಿಗೆ ಖುದ್ದು ಕುಮಾರಸ್ವಾಮಿ ಒಬ್ಬರೇ ಸಮರ್ಥನೆ, ಪ್ರತಿಕ್ರಿಯೆ ನೀಡುತ್ತಿದ್ದಾರೆ. ಕುಮಾರಸ್ವಾಮಿ ಹೊರತುಪಡಿಸಿ ರಾಜ್ಯದ ಯಾವುದೇ ಬಿಜೆಪಿ ನಾಯಕರು ಮಾತಾಡುತ್ತಿಲ್ಲ. ಕುಮಾರಸ್ವಾಮಿ ಹೆಸರು ಉಲ್ಲೇಖವಾಗುತ್ತಿದ್ದಂತೆ ಎಲ್ಲ ಬಿಜೆಪಿ ನಾಯಕರು ಈಗ ಸಿದ್ದರಾಮಯ್ಯ ವಿರುದ್ಧ ಮಾತಾಡುವುದನ್ನೂ ನಿಲ್ಲಿಸಿದ್ದಾರೆ. ಸದ್ಯಕ್ಕೆ ರಾಜ್ಯಪಾಲರ ವಿರುದ್ಧ ಅವಹೇಳನಕಾರಿ ಮತ್ತು ಪ್ರಚೋದನಕಾರಿ ಹೇಳಿಕೆ ನೀಡಿದ ವಿಧಾನ ಪರಿಷತ್ ಸದಸ್ಯ ಐವಾನ್ ಡಿಸೋಜಾ ವಿರುದ್ಧ ಮಾತ್ರವೇ ಬಿಜೆಪಿ ನಾಯಕರು ಆಕ್ರೋಶ ಹೊರಬರುತ್ತಿದೆ.

ಬಿಜೆಪಿ -ಜೆಡಿಎಸ್ ಮೈತ್ರಿ ಕೇವಲ ಅಧಿಕಾರಕ್ಕಾಗಿ ಮಾತ್ರವೇ? ಮೈತ್ರಿ ಪಕ್ಷದ ಅಭ್ಯರ್ಥಿ ಮೇಲೆ ಆರೋಪ ಬಂದಾಗ ಅದನ್ನು ಅಲ್ಲಗಳೆಯುವ ಸಣ್ಣ ಪ್ರಯತ್ನವೂ ಮೈತ್ರಿ ಪಕ್ಷದಿಂದ ಆಗಿಲ್ಲ ಎಂದಾದರೆ, ಭವಿಷ್ಯದಲ್ಲಿ ಮೈತ್ರಿ ಬಗ್ಗೆ ಮುನಿಸು ಶುರುವಾಗುತ್ತದೆ ಎಂದೇ ಅರ್ಥ.

ಶ್ರೀ ಗುರು ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವದ ಪ್ರಯುಕ್ತ ವಿಶೇಷ ಲೇಖನ

ರಾಯರ ಆರಾಧನೆಯ ಒಂದು ಅವಲೋಕನ

ಶ್ರೀ ಗುರು ರಾಘವೇಂದ್ರ ಸ್ವಾಮಿಗಳು ವಿಷ್ಣು ದೇವನನ್ನು ಸರ್ವೋಚ್ಚ ದೇವನಾಗಿ ಪೂಜಿಸುವ ವೈಷ್ಣವ ಧರ್ಮವನ್ನು ಅನುಸರಿಸಿದವರು ಮತ್ತು ಶ್ರೀ ಮಧ್ವಾಚಾರ್ಯರ ದ್ವೈತ ತತ್ವಶಾಸ್ತ್ರವನ್ನು ಪ್ರತಿಪಾದಿಸಿದ 16ನೇ ಶತಮಾನದ ಪ್ರಭಾವಿ ಹಿಂದೂ ಸಂತರೆನಿಸಿಕೊಂಡವರು. ಅವರು 1671ರಲ್ಲಿ ಇಂದಿನ ಆಂಧ್ರಪ್ರದೇಶದ ಮಂತ್ರಾಲಯದಲ್ಲಿ ಬೃಂದಾವನವನ್ನು ಸ್ವೀಕರಿಸಿದರು ಎಂದು ಹೇಳಲಾಗುತ್ತದೆ. ಭಾರತದಲ್ಲಿರುವ ಅತ್ಯಂತ ಜನಪ್ರಿಯ ಧಾರ್ಮಿಕ ತಾಣಗಳಲ್ಲಿ ಒಂದಾದ ರಾಘವೇಂದ್ರ ಸ್ವಾಮಿಗಳ ಬೃಂದಾವನದಲ್ಲಿ ಅವರ ಭಕ್ತರು ಭೌತಿಕ ಅಥವಾ ಆಧ್ಯಾತ್ಮಿಕ ರೂಪದಲ್ಲಿ ರಾಯರನ್ನು ನೋಡುತ್ತಾರೆ. ಲಕ್ಷಾಂತರ ಭಕ್ತರು ನಂಬುವ ರಾಘವೇಂದ್ರ ಸ್ವಾಮಿಗಳ ಕುರಿತು ಒಂದಿಷ್ಟು ವಿಚಾರಗಳನ್ನು ನಾವಿಲ್ಲಿ ತಿಳಿದುಕೊಳ್ಳುವ ಪ್ರಯುಕ್ತ ಒಂದು ವಿಶೇಷ ಅವಲೋಕನ.



ಶ್ರೀ ರಾಘವೇಂದ್ರ ಸ್ವಾಮಿಗಳು ಶ್ರೀ ವೆಂಕಣ್ಣ ಭಟ್ಟರಾಗಿ ಜನಿಸಿದರು. 1595ರಲ್ಲಿ ಫಾಲ್ಗುಣ ಮಾಸದ ಶುಕ್ಲ ಸಪ್ತಮಿಯ ಗುರುವಾರದಂದು ಚಂದ್ರನು ಮೃಗಶಿರ ನಕ್ಷತ್ರದಲ್ಲಿದ್ದಾಗ ಇಂದಿನ ತಮಿಳುನಾಡಿನ ಚಿದಂಬರಂ ಬಳಿಯ ಭುವನಗಿರಿಯಲ್ಲಿ ರಾಘವೇಂದ್ರ ಸ್ವಾಮಿಗಳು ಜನಿಸಿದರು. ವೆಂಕಟನಾಥ ಅತ್ಯಂತ ಅದ್ಭುತ ವಿದ್ವಾಂಸರಾಗಿದ್ದರು. ಚಿಕ್ಕವರಿದ್ದಾಗಲೇ ವೆಂಕಟನಾಥರು 'ಓಂ' ನಂತಹ ಸಣ್ಣ ವಸ್ತುವು ದೇವರ ಅನಂತ ಶ್ರೇಷ್ಠತೆಯನ್ನು ಹೇಗೆ ಸೆರೆ ಹಿಡಿಯುತ್ತದೆ ಎಂದು ಅವನು ತನ್ನ ತಂದೆಯನ್ನು ಪ್ರಶ್ನಿಸಿದ್ದರು.

ವೆಂಕಟನಾಥರು ಶ್ರೀಮಂತ ಕುಟುಂಬದಿಂದ ಬಂದ ಸರಸ್ವತಿಯನ್ನು ವಿವಾಹವಾದರು. ತನ್ನ ಇಂದ್ರಿಯಗಳ ಮೇಲೆ ಹಿಡಿತ ಹೊಂದಿರುವವನಿಗೆ ವಿವಾಹಿತ ಜೀವನವು ಕಲಿಕೆಗೆ ಅಡ್ಡಿಯಾಗುವುದಿಲ್ಲ ಎಂದು ಶಾಸ್ತ್ರಗಳು ಹೇಳುತ್ತವೆ. ಇದು ನಿಜವೆಂಬಂತೆ ವೆಂಕಟನಾಥರಿಗೆ, ಅವರ ಹೆಚ್ಚಿನ ಕಲಿಕೆಯು ಸರಸ್ವತಿಯನ್ನು ಮದುವೆಯಾದ ನಂತರ, ಸರಸ್ವತಿ ದೇವಿಯ ಆಶೀರ್ವಾದದ ಮೂಲಕ ಸಂಭವಿಸಿತು. ಕುಂಭಕೋಣಂನಲ್ಲಿ ಸುಧೀಂದ್ರ ತೀರ್ಥರ ಆಶ್ರಯದೊಂದಿಗೆ ದ್ವೈತ ವೇದಾಂತ, ವ್ಯಾಕರಣ ಮತ್ತು ಇತರ ಶಾಸ್ತ್ರಗಳ ಮೇಲಿನ ಸುಧಾರಿತ ಕೃತಿಗಳನ್ನು ಅಧ್ಯಯನ ಮಾಡಿದರು.

ರಾಯರ ಜೀವನವು ದೇವರ ಆರಾಧನೆ ಮತ್ತು ಮಾನವೀಯತೆಯ ಸೇವೆಯಲ್ಲಿ ಕಳೆದಾಗ, ಅವರ ಆಧ್ಯಾತ್ಮಿಕ ಗುರುಗಳಾದ ಶ್ರೀ ಸುಧೀಂದ್ರ ತೀರ್ಥರು ಅವರ ಮಠಕ್ಕೆ ಉತ್ತರಾಧಿಕಾರಿಯನ್ನು ಹುಡುಕುತ್ತಿದ್ದರು. ಅವರ ನಂತರ ಮಠಾಧೀಶರಾಗಲು ಶ್ರೀ ವೆಂಕಟನಾಥನೇ ಸೂಕ್ತ ವ್ಯಕ್ತಿ ಎಂದು ದೇವರು ಅವರ ಕನಸಿನಲ್ಲಿ ಸೂಚನೆಯನ್ನು ನೀಡುತ್ತಾನೆ. ಶ್ರೀ ವೆಂಕಟನಾಥನು ತನ್ನ ಹೆಂಡತಿ ಮತ್ತು ಮಗನ ಮೇಲಿನ ಜವಾಬ್ದಾರಿಯಿಂದಾಗಿ ಆರಂಭದಲ್ಲಿ ನಿರಾಕರಿಸಿದರೂ, ಕನಸಿನಲ್ಲಿ ವಿದ್ಯಾಲಕ್ಷ್ಮೀ ಬಂದು ಸೂಚನೆಯನ್ನು ನೀಡಿದ ಮೇಲೆ ಸನ್ಯಾಸ ದೀಕ್ಷೆಯನ್ನು ತೆಗೆದುಕೊಳ್ಳುತ್ತಾರೆ.

ಹಿಂದೂ ಧರ್ಮದ ತತ್ವಗಳ ಪ್ರಕಾರ, ವೆಂಕಟನಾಥರ ಪತ್ನಿ ಅಕಾಲಿಕ ಮರಣಕ್ಕೆ ಗುರಿಯಾದಾಗ ಅವಳ ಆತ್ಮವು ಸ್ವರ್ಗ ಮತ್ತು ಭೂಮಿಯ ನಡುವಿನಲ್ಲಿ ಸಿಕ್ಕಿಬಿದ್ದ ಪ್ರೇತವಾಯಿತು. ತನ್ನ ಪತಿಯನ್ನು ನೋಡುವ ಅವಳ ಕೊನೆಯ ಆಸೆಯು ಈಡೇರದ ಕಾರಣ, ಅವಳ ಪ್ರೇತವು ದೀಕ್ಷೆಯ ಕಾರ್ಯವನ್ನು ವೀಕ್ಷಿಸಲು ಮಠಕ್ಕೆ ಹೋಯಿತು. ಆದರೆ, ಅವರು ಬರುವಷ್ಟರಲ್ಲಿ ಅವರ ಪತಿ ಸನ್ಯಾಸಿ ಶ್ರೀ ರಾಘವೇಂದ್ರ ತೀರ್ಥರಾಗಿದ್ದರು. ಆದಾಗ್ಯೂ, ಶ್ರೀ ಗುರು ರಾಘವೇಂದ್ರರು ತಮ್ಮ ಆಧ್ಯಾತ್ಮಿಕ ಶಕ್ತಿಯಿಂದ ತಮ್ಮ ಹೆಂಡತಿಯ ಉಪಸ್ಥಿತಿಯನ್ನು ತಕ್ಷಣವೇ ಗ್ರಹಿಸಿದರು. ಅವಳ ಕೊನೆಯ ಆಸೆಯನ್ನು ಪೂರೈಸುವ ಸಾಧನವಾಗಿ ಅವರು ತನ್ನ ಕಮಂಡಲದಿಂದ ಸ್ವಲ್ಪ ಪವಿತ್ರ ನೀರನ್ನು ಅವಳ ಆತ್ಮದ ಮೇಲೆ ಎರಚಿದರು. ಈ ಕ್ರಿಯೆಯು ಅವಳಿಗೆ ಮೋಕ್ಷ ಅಥವಾ ಜನನ ಮತ್ತು ಮರಣಗಳ ಚಕ್ರದಿಂದ ವಿಮೋಚನೆಯನ್ನು ನೀಡಿತು.

ಶ್ರೀ ರಾಘವೇಂದ್ರ ಸ್ವಾಮಿಗಳು 1671ರಲ್ಲಿ ಶ್ರಾವಣ ಕೃಷ್ಣ ಪಕ್ಷದ ದ್ವಿತೀಯ ದಿನದಂದು ಜೀವ ಸಮಾಧಿಯನ್ನು ಪಡೆದರು. ಈ ದಿನಾಂಕವನ್ನು ಪ್ರಪಂಚದಾದ್ಯಂತ ಬೃಂದಾವನಗಳಲ್ಲಿ ಪ್ರತಿ ವರ್ಷ ಶ್ರೀ ರಾಘವೇಂದ್ರ ಸ್ವಾಮಿ ಆರಾಧನೆ ಎಂದು ಆಚರಿಸಲಾಗುತ್ತದೆ. ಅದರಂತೆ ಗದುಗಿನ ಶ್ರೀ ವೀರನಾರಾಯಣ ದೇವಸ್ಥಾನದ ಶ್ರೀ ರಾಘವೇಂದ್ರ ಸ್ವಾಮಿ ಆರಾಧನೆ ಮಂಡಳಿಯ ವತಿಯಿಂದ ಪ್ರತಿವರ್ಷ ಶುದ್ಧ ಶ್ರಾವಣ ಮಾಸದ ಕೃಷ್ಣ ಪಕ್ಷದಲ್ಲಿ ನಯನ ಮನೋಹರವಾಗಿ ಅತೀ ವಿಜೃಂಭಣೆಯಿಂದ ರಾಯರ ಆರಾಧನಾ ಮಹೋತ್ಸವವನ್ನು ಆಚರಿಸಲಾಗುತ್ತದೆ.

– ಸಹನಾ ರಾಘವೇಂದ್ರ
ಪಾಲನಕರ. ಗದಗ.

ಮೂಲಭೂತ ಸೌಲಭ್ಯ ಒದಗಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಅವಳಿ ನಗರಗಳಿಗೆ ನಿತ್ಯ ಶುದ್ಧ ಕುಡಿಯುವ ನೀರು ಪೂರೈಕೆ ಮತ್ತು ನಗರದ ರಸ್ತೆಗಳ ಸುಗಮ ಸಂಚಾರಕ್ಕೆ ಕ್ರಮ ಕೈಗೊಳ್ಳಲು ಒತ್ತಾಯಿಸಿ ಜನಪರ ಸಂಘಟನೆಗಳ ಒಕ್ಕೂಟ ಮತ್ತು ಕೊಳಚೆ ನಿರ್ಮೂಲನಾ ವೇದಿಕೆಯಿಂದ ನಗರ ಸಭೆ ನೂತನ ಅಧ್ಯಕ್ಷ ಅಮ್ಜದ್ ಪಟೇಲರಿಗೆ ಮನವಿ ಅರ್ಪಿಸಿದರು.

ಅವಳಿ ನಗರಗಳಿಗೆ ಸರ್ಕಾರದಿಂದ ಕೋಟ್ಯಾಂತರ ರೂಪಾಯಿ ಅನುದಾನ ಬಂದರೂ ನಿತ್ಯ ಶುದ್ಧ ಕುಡಿಯುವ ನೀರು ಪೂರೈಕೆ ಯೋಜನೆ ನಾಗರಿಕರಿಗೆ ತಲುಪುತ್ತಿಲ್ಲ. ನಗರದ ಮುಖ್ಯ ರಸ್ತೆಗಳಲ್ಲಿ ಹಾಗೂ ಬಡಾವಣೆಗಳ ರಸ್ತೆಗಳಲ್ಲಿ ಅಲ್ಲಲ್ಲಿ ತೆಗ್ಗುಗಳು ಬಿದ್ದಿದ್ದು, ಕೆಲವು ಕಡೆ ಅವೈಜ್ಞಾನಿಕವಾಗಿ ರಸ್ತೆಗಳಲ್ಲಿ ಉಬ್ಬುಗಳನ್ನು ಸೃಷ್ಟಿಸಿರುವುದರಿಂದ ದ್ವಿಚಕ್ರ ವಾಹನ ಸವಾರರ ಜೀವಕ್ಕೆ ಅಪಾಯಕಾರಿಯಾಗಿವೆ. ತಕ್ಷಣ ದುರಸ್ತಿಗೊಳಿಸಬೇಕು ಎಂದು ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್, ಕೊಳಚೆ ನಿರ್ಮೂಲನಾ ವೇದಿಕೆಯ ಜಿಲ್ಲಾ ಸಂಚಾಲಕ ತುಕಾರಾಮ್ ಬಿ.ಪಾತ್ರೋಟಿ, ಮುಖಂಡ ಮೌಲಾ ಹುಸೇನ್ ಹಣಗಿ, ನಾಗರಾಜ್ ಯಾದವ್, ಆದಿತ್ಯ ಟಿ.ಪಾತ್ರೋಟಿ ಮುಂತಾದವರು ಒತ್ತಾಯಿಸಿದರು.

ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ವಿಕಲಚೇತನರ ರಾಷ್ಟ್ರೀಯ ವಿದ್ಯಾರ್ಥಿ ವೇತನ ಯೋಜನೆಯಡಿ ನ್ಯಾಷನಲ್ ಸ್ಕಾಲರ್‌ಶಿಪ್ ಪೋರ್ಟಲ್‌ನಲ್ಲಿ ವಿದ್ಯಾರ್ಥಿ ವೇತನದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಗದಗ ಜಿಲ್ಲೆಯಲ್ಲಿ Pre Metric & Post Metric ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ಪ್ರಿಮೆಟ್ರಿಕ್ ಅರ್ಜಿ ಸಲ್ಲಿಸಲು ಆಗಸ್ಟ್ 31ರವರೆಗೆ ಹಾಗೂ ಪೋಸ್ಟ್ ಮೆಟ್ರಿಕ್ ಮತ್ತು ಟಾಪ್ ಕ್ಲಾಸ್‌ಗಳ ವಿದ್ಯಾರ್ಥಿ ವೇತನಕ್ಕೆ ಅಕ್ಟೋಬರ್ 31ರೊಳಗೆ ಆನ್‌ಲೈನ್ ಮೂಲಕ **https://scholarships.gov.in/** ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಒಂದು ಪ್ರತಿಯನ್ನು ತಮ್ಮ ವ್ಯಾಪ್ತಿಗೊಳಪಡುವ ಗ್ರಾ.ಪಂ VRW, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿ URW, ತಾ.ಪಂ. MRW ಇವರಲ್ಲಿ ಅರ್ಜಿ ಸಲ್ಲಿಸಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಖಾಜಾಹುಸೇನ ಕಾತರಕಿ, MRW ತಾ.ಪಂ ಗದಗ-8867556465, ಬಸವರಾಜ ಓಲಿ, MRW ತಾ.ಪಂ ರೋಣ-9741615926, ಶಶಿಕಲಾ ವಡ್ಡಟ್ಟಿ, MRW ತಾ.ಪಂ ಮುಂಡರಗಿ-9611922445, ಭಾರತಿ ಮುರಶಿಳ್ಳಿ, MRW ತಾ.ಪಂ ಶಿರಹಟ್ಟಿ-8951128679, ಶಿವಾನಂದ ಹಾದಿಮನಿ MRW ತಾ.ಪಂ ನರಗುಂದ-9591679022, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ರೂಮ್ ನಂ:29ರ ದೂರವಾಣಿ ಸಂಖ್ಯೆ 08372-220419 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಕೊಲ್ಕತ್ತಾದ ಮೆಡಿಕಲ್ ಕಾಲೇಜಿನ ವೈದ್ಯ ವಿದ್ಯಾರ್ಥಿನಿಯನ್ನು ಅತ್ಯಾಚಾರ ಮಾಡಿ ಕೊಲೆಗೈದ ದುಷ್ಕರ್ಮಿಗಳಿಗೆ ಕಾನೂನು ರೀತಿ ಅವರಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಕೇಂದ್ರ ಗೃಹ ಸಚಿವರಿಗೆ ಜಿವ್ಸ್ ಹೊರಗುತ್ತಿಗೆ ನೌಕರರ ಕಾರ್ಮಿಕ ಸಂಘ ವತಿಯಿಂದ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಲ್ಲಪ್ಪ ಬಾವಿಮನಿ, ಕೃಷ್ಣ ಮಡಿವಾಳರ್, ರಾಜು ಸಾಬೋಜಿ, ರಾಘವೇಂದ್ರ ನಾಗನಾಥನಹಳ್ಳಿ, ವಿವೇಕ್ ಮಾನೆ, ಮಂಜುನಾಥ್ ರಾಮೋನಹಳ್ಳಿ, ಇಜಾಜ್ ಧಾರವಾಡ, ಭರತ್ ಸೊನ್ನೆದ, ಮೈಲಾರಿ ಹಾದಿಮನಿ, ಹುಲ್ಲಗೇಶ್ ಚೌಡಮ್ಮನವರ್, ಮಂಜುನಾಥ್ ದೊಡ್ಮನಿ, ನಾಗರಾಜ್ ಯರಗುಡಿ, ಮಮ್ತಾಜ್ ರೋಣ, ರಜಿಯಾ ಅನ್ಸಾರೆ, ಲಕ್ಷ್ಮೀ ಗೊಲ್ಲರ್, ವೇದಾ ಸುಣಗಾರ, ಚಂಪಾವತಿ ಗುಳ್ಳೆದ ಮುಂತಾದವರು ಉಪಸ್ಥಿತರಿದ್ದರು.

ನರೇಗಲ್ಲ ಸಮೀಪದ ಡ.ಸ. ಹಡಗಲಿ ಗ್ರಾಮದ ಗ್ರಾಮ ಆಡಳಿತಾಧಿಕಾರಿ ಜೆ.ಎಚ್. ಜಂಟ್ಲಿ ಅವರಿಗೆ ಪಹಣಿಗೆ ಆಧಾರ್ ಸೀಡಿಂಗ್ ಕಾರ್ಯದಲ್ಲಿ ಶೇ. 93ರಷ್ಟು ಪ್ರಗತಿ ಸಾಧಿಸಿದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಪ್ರಶಂಸನಾ ಪತ್ರ ನೀಡಿ ಸನ್ಮಾನಿಸಿದರು.

ಬೇರೊಬ್ಬ ರಾಜ್ಯಪಾಲರನ್ನು ನೇಮಿಸಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯಲ್ಲಿ ಎಐಸಿಸಿ ಮಾನವ ಹಕ್ಕುಗಳ ಸಮಿತಿ ಗದಗ ಜಿಲ್ಲೆ ಹಾಗೂ ಸಿದ್ದರಾಮಯ್ಯ ಅಭಿಮಾನಿ ಬಳಗದ ವತಿಯಿಂದ ರಾಜ್ಯದಲ್ಲಿ ಬೇರೊಬ್ಬ ರಾಜ್ಯಪಾಲರ ನೇಮಕ ಮಾಡಬೇಕೆಂದು ಆಗ್ರಹಿಸಿ ತಹಸೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂತೋಷ ಕುರಿ, ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ರಾಜ್ಯಪಾಲರು ತರಾತುರಿಯಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದು ಹಲವು ಸಂಶಯಕ್ಕೆ ಕಾರಣವಾಗಿದೆ. ಈ ಹಿಂದೆ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಹಾಗೂ ಭಾರತೀಯ ಜನತಾಪಕ್ಷದ ಹಲವಾರು ನಾಯಕರ ಕೇಸ್ ಫೈಲ್‌ಗಳು ಹಲವಾರು ತಿಂಗಳುಗಳಿಂದ ರಾಜ್ಯಪಾಲರ ಅಂಗಳದಲ್ಲಿದ್ದು, ಇದರ ಬಗ್ಗೆ ಯಾವುದೇ ಕ್ರಮ ಕೈಕೊಳ್ಳದ ರಾಜ್ಯಪಾಲರು ತರಾತುರಿಯಲ್ಲಿ ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದರ ಹಿಂದೆ ಎನ್‌ಡಿಎ ಸರಕಾರದ ಕುತಂತ್ರವಿದ್ದಂತಿದೆ. ಈ ಕೂಡಲೇ ರಾಜ್ಯಪಾಲರನ್ನು ಹಿಂಪಡೆದು ಬೇರೊಬ್ಬ ರಾಜ್ಯಪಾಲರ ನೇಮಕ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಯಲ್ಲಪ್ಪಗೌಡ ಅಣ್ಣಿಗೇರಿ, ಕರಿಯಪ್ಪ ಬಳೂಟಗಿ, ಜಗದೀಶ ಇಟ್ಟೇಕಾರ, ಸಣ್ಣಪ್ಪ ವಾಲೀಕಾರ, ಎಚ್.ಎಚ್. ಹಾಲಪ್ಪನವರ, ಸಿ.ಎಸ್. ಜೋಗೇರ ಮುಂತಾದವರು ಉಪಸ್ಥಿತರಿದ್ದರು.

ದಾಖಲೆ ತಿದ್ದುವಂತ ನೀಚ ಕೆಲಸಕ್ಕೆ ನಾವ್ಯಾರೂ ಇಳಿದಿಲ್ಲ: ಸಚಿವ ಬೈರತಿ ಸುರೇಶ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದಾಖಲೆ ತಿದ್ದುವಂತ ಪರಿಸ್ಥಿತಿ ನಮಗೆ ಬಂದಿಲ್ಲ. ಅಂತಹ ನೀಚ ಕೆಲಸಕ್ಕೆ ನಾವ್ಯಾರೂ ಇಳಿದಿಲ್ಲ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಹೇಳಿದ್ದಾರೆ.

ಕುಮಾರಸ್ವಾಮಿ ಆರೋಪಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದರು. ದಾಖಲೆ ತಿದ್ದುವಂತ ಪರಿಸ್ಥಿತಿ ನಮಗೆ ಬಂದಿಲ್ಲ. ಅಂತಹ ನೀಚ ಕೆಲಸಕ್ಕೆ ನಾವ್ಯಾರೂ ಇಳಿದಿಲ್ಲ. ಉಚ್ಚ ನ್ಯಾಯಾಲಯದಲ್ಲಿ ವಿಚಾರಣೆ ಇದೆ.

ಅಲ್ಲಿ ಬೇರೇನೋ ಆಗಿದೆ ಅನ್ನೋದು ಅಲ್ಲ. ಇದು ನಮ್ಮ ಪೋರ್ಟ್ ಪೊಲೀಯೋ ಅಲ್ಲ. ಏನು ತಪ್ಪಾಗೋದೆ ಇಲ್ವಾ?

ತಾಲೂಕು ಮಟ್ಟದ ಪ.ಪೂ ಕಾಲೇಜುಗಳ ಕ್ರೀಡಾಕೂಟಕ್ಕೆ ಶಾಸಕ ಚಂದ್ರು ಲಮಾಣಿ ಚಾಲನೆ

ಕ್ರೀಡೆಯಿಂದ ನಾಯಕತ್ವದ ಗುಣ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿಗಳ ದೈಹಿಕ, ಮಾನಸಿಕ, ಬೌದ್ಧಿಕ ಬೆಳವಣಿಗೆಗೆ ಕ್ರೀಡೆಗಳು ಪೂರಕ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಕ್ರೀಡೆ ಪರಸ್ಪರ, ಸ್ನೇಹ, ಬಾಂಧವ್ಯ ವೃದ್ಧಿಸುವ ಮತ್ತು ನಾಯಕತ್ವದ ಗುಣ ಬೆಳೆಯುವಲ್ಲಿ ನೆರವಾಗುತ್ತದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಬುಧವಾರ ಲಕ್ಷ್ಮೇಶ್ವರ ಪುರಸಭೆಯ ಉಮಾ ವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ಪ.ಪೂ ಶಿಕ್ಷಣ ಇಲಾಖೆ, ಪುರಸಭೆ ಕಾರ್ಯಾಲಯ ಹಾಗೂ ಪುರಸಭೆ ಪ.ಪೂ ಕಾಲೇಜುಗಳ ಸಹಯೋಗದಲ್ಲಿ ಲಕ್ಷ್ಮೇಶ್ವರ ತಾಲೂಕು ಮಟ್ಟದ ಪ.ಪೂ ಕಾಲೇಜುಗಳ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ಕ್ರೀಡೆಯಿಂದ ಶಿಸ್ತು, ಸಂಯಮ ಮತ್ತು ಆರೋಗ್ಯ ವೃದ್ಧಿಸುತ್ತದೆ. ಕ್ರೀಡೆಯಲ್ಲಿ ಗೆಲ್ಲಲು ಉತ್ತಮ ತರಬೇತಿ ಅಗತ್ಯ. ಪರಿಣತಿಯನ್ನು ಗಳಿಸಲು ಸತತ

ಸಾಧನೆ ಮಾಡಬೇಕು. ಉತ್ತಮ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಕಾರ್ಯ ಮಾಡುವದು ಅವಶ್ಯವಾಗಿದೆ. ಕ್ರೀಡೆಯಿಂದ ಸಾಧನೆ ಮಾಡಿದ ಅನೇಕರು ಇಂದು ನಮ್ಮ ನಡುವೆಯಿದ್ದು, ಓಲಂಪಿಕ್ ಕ್ರೀಡೆಯಲ್ಲಿ ಆಟಕ್ಕೆ ಇರುವ ಮಹತ್ವ ಎಷ್ಟು ದೊಡ್ಡದು ಎನ್ನುವದನ್ನು ನೋಡಬಹುದಾಗಿದೆ.

ಗದಗ ಜಿಲ್ಲಾ ಕ್ರೀಡಾ ಸಂಚಾಲಕ ಎಂ.ಕೆ. ಲಮಾಣಿ ಪ್ರತಿಜ್ಞಾ ವಿಧಿ ಬೋಧಿಸಿದರು. ವೇದಿಕೆಯಲ್ಲಿ ತಾಲೂಕಾ ಉಪನ್ಯಾಸಕರ ಸಂಘದ ಅಧ್ಯಕ್ಷ ಮಂಜುನಾಥ ಕೊಕ್ಕರಗುಂದಿ, ನವೀನ ಬೆಳ್ಳಟ್ಟಿ, ನಿವೃತ್ತ ಶಿಕ್ಷಕ ಎಚ್.ಎಂ. ಮುಳಗುಂದ, ಪುರಸಭೆ ಪ.ಪೂ ಕಾಲೇಜು ಪ್ರಾಚಾರ್ಯ ಅಶೋಕ ಕಳ್ಳಿಮನಿ, ಉಪನ್ಯಾಸಕರಾದ ಜಗದೀಶ ದ್ಯಾಮಣ್ಣವರ, ಸೌಂದರ್ಯ ಕುಲಕರ್ಣಿ, ಎಮ್. ಎಚ್. ಬೊದ್ಲೆಖಾನ್, ಚೈತ್ರಾ ಪಾಣಿಗಟ್ಟಿ, ನೇತ್ರಾ ಹಿತ್ತಲಮನಿ, ಪಿ.ಡಿ. ದೇಶಪಾಂಡೆ, ಬಿ.ಜೆ. ಪಾಟೀಲ, ಹಾಗೂ ತಾಲೂಕಿನ ಪ.ಪೂ ಕಾಲೇಜುಗಳ ಪ್ರಾಚಾರ್ಯರು, ದೈಹಿಕ ಶಿಕ್ಷಣ ನಿರ್ದೇಶಕರು, ನಿರ್ಣಾಯಕರು ಎಚ್.ಎಲ್. ಕೋರಿ, ಶಿಲ್ಪಾ ಮುದಗಲ್ ಇದ್ದರು.

ಡಿ.ಎಂ. ಪೂಜಾರ ಸ್ವಾಗತಿಸಿದರು. ಎಸ್.ಜಿ. ಹುಳಕನವರ ನಿರೂಪಿಸಿದರು. ಮಂಜುನಾಥ ಬೂದಿಹಾಳ ವಂದಿಸಿದರು.

ವಿದ್ಯಾರ್ಥಿಗಳು ಕ್ರೀಡೆಯ ಜೊತೆಗೆ ಪಾಠಕ್ಕೂ ಅಷ್ಟೇ ಆದ್ಯತೆ ನೀಡಬೇಕು. ಸಾಧನೆ ಮಾಡುವ ಛಲ ನಿಮ್ಮಲ್ಲಿದ್ದರೆ ಗುರಿ ತಲುಪುವ ಹಾದಿ ಸುಲಭವಾಗಲಿದೆ. ದೈಹಿಕ, ಮಾನಸಿಕ ಸದೃಢತೆಗೆ ಕ್ರೀಡೆ ಅವಶ್ಯವಾಗಿದ್ದು, ನಮ್ಮ ಪುರಸಭೆಯ ಪ.ಪೂ ಕಾಲೇಜಿನಲ್ಲಿ ತಾಲೂಕು ಮಟ್ಟದ ಕ್ರೀಡಾಕೂಟ ನಡೆಸಲು ಅವಕಾಶ ದೊರಕಿಸಿಕೊಟ್ಟಿದ್ದಕ್ಕೆ ಇಲಾಖೆ ಅಧಿಕಾರಿಗಳಿಗೆ ಧನ್ಯವಾದಗಳನ್ನು ಹೇಳುತ್ತೇವೆ ಎಂದರಲ್ಲದೆ, ಗೆಲುವು-ಸೋಲುಗಳನ್ನು ಕ್ರೀಡಾಸ್ಫೂರ್ತಿಯಿಂದ ಸ್ವೀಕರಿಸುವ ಮನೋಭಾವನೆ ಬೆಳೆಸಿಕೊಳ್ಳಿ ಎಂದು ಮುಖ್ಯಾಧಿಕಾರಿ ಮಹೇಶ ಹಡಪದ ಕಿವಿಮಾತು ಹೇಳಿದರು.

ಪ್ರವಚನ ಕಾರ್ಯಕ್ರಮ ಇಂದಿನಿಂದ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಆಗಸ್ಟ್ 22ರಿಂದ ಶರಣರ ತತ್ವ ಚಿಂತನ ಪ್ರವಚನ ಕಾರ್ಯಕ್ರಮ ಪ್ರತಿದಿನ ಸಂಜೆ 8ಕ್ಕೆ ಆರಂಭವಾಗಲಿದೆ.

ಮುಂಡರಗಿ ನಾಡೋಜ ಡಾ. ಅನ್ನದಾನೀಶ್ವರ ಸ್ವಾಮಿಗಳು ಸಾನ್ನಿಧ್ಯ ವಹಿಸಿ ಪ್ರವಚನಕ್ಕೆ ಚಾಲನೆ ನೀಡಲಿದ್ದಾರೆ. ಶಂಕ್ರಯ್ಯ ಹಿರೇಮಠ ಅಧ್ಯಕ್ಷತೆ ವಹಿಸುವರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಯುವ ಧುರೀಣ ಉಮೇಶಗೌಡ ಪಾಟೀಲ, ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ನಿವೃತ್ತ ಯೋಧ ದತ್ತಣ್ಣ ಜೋಶಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದಲಿಂಗೇಶ್ವರ ಪಾಟೀಲ, ಅಶೋಕ ಕಣವಿ, ನಿವೃತ್ತ ಪ್ರಾಚಾರ್ಯ ನೀಲಕಂಠ ಮುಕ್ಕಣ್ಣವರ, ಯುವ ಮುಖಂಡ ವೀರಯ್ಯ ಗಂಧದ, ಅಶೋಕ ಕಲ್ಲೂರ, ಮಹಾಲಿಂಗಯ್ಯ ನರಗುಂದಮಠ, ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ಹಾಗೂ ಗ್ರಾ.ಪಂ ಸದಸ್ಯರು ಪಾಲ್ಗೊಳ್ಳುವರು.

ಗದಗ ನಗರದ ಡಾ. ಗಿರಿಜಾ ಹಸಿಬಿ ಶರಣರ ತತ್ವ ಚಿಂತನವನ್ನು ಪ್ರವಚನ ಮಾಡಲಿದ್ದಾರೆ. ಷಡಕ್ಷರಯ್ಯ ಬದ್ನಿಮಠ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡುವರು. ಸೆ.5ರಂದು ಪ್ರವಚನ ಮುಕ್ತಾಯಗೊಳ್ಳಲಿದ್ದು, ಅಂದು ಸಾಮೂಹಿಕ ವಿವಾಹ ನೆರವೇರಲಿದೆ. ವಿವಾಹವಾಗಲಿಚ್ಛಿಸುವವರು ಸೆ.3ರೊಳಗೆ ಹೆಸರು ನೋದಾಯಿಸಬೇಕು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಕದಳಿಶ್ರೀ ವೇದಿಕೆಯಿಂದ ಅಮೃತ ಭೋಜನ, ಕಲಿಕಾ ಸಾಮಗ್ರಿ ವಿತರಣೆ

ವಿದ್ಯಾರ್ಥಿಗಳು ಸ್ಫೂರ್ತಿಯಿಂದ ಕಲಿಯಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಸ್ಫೂರ್ತಿಯಿಂದ ಕಲಿಕೆಯಲ್ಲಿ ತೊಡಗಬೇಕು. ಬಾಲ್ಯವು ಮಕ್ಕಳ ಬದುಕಿಗೆ ಅಡಿಪಾಯದ ಹಂತ, ಸತತ ಓದು, ಶಿಸ್ತು-ಮೌಲ್ಯಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಂಡು ಒಳ್ಳೆಯ ವಿದ್ಯಾರ್ಥಿಗಳಾಗಬೇಕು ಎಂದು ಚಿಂತಕಿ ಅನ್ನಪೂರ್ಣ ವರವಿ ಹೇಳಿದರು.

ಅವರು ಮಂಗಳವಾರ ಗದಗ ಜಿಲ್ಲಾ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯಿಂದ ಗದುಗಿನ ಸರಕಾರಿ ಶಾಲೆ ನಂ. 13ರಲ್ಲಿ ಜರುಗಿದ ಅಮೃತ ಭೋಜನ ಜ್ಞಾನಸಿಂಚನ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಿಸಿ ಮಾತನಾಡಿದರು.

ಬಾಲ್ಯದಲ್ಲಿಯೇ ದೇಶಾಭಿಮಾನ, ಐಕ್ಯತೆ, ಸ್ನೇಹಪರತೆ, ಸಹಬಾಳ್ವೆಯಂತಹ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಒಳ್ಳೆಯ ಸಂಸ್ಕೃತಿಯನ್ನು ಬೆಳೆಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷೆ ಜಯಶ್ರೀ ಉಗಲಾಟ ಮಾತನಾಡಿ, ನಮ್ಮ ಬದುಕು ಸಂಸ್ಕಾರಯುತವಾಗಬೇಕು. ಬಾಲ್ಯದಲ್ಲಿಯೇ ಸಹಕಾರ, ಪ್ರೀತಿ, ಸಂಸ್ಕೃತಿಗಳನ್ನು ಮಕ್ಕಳು ಜೀವನದಲ್ಲಿ ಅಳವಡಿಸಿಕೊಂಡು ಹಿರಿಯರ ಮಾರ್ಗದರ್ಶನದಲ್ಲಿ ನಡೆಯಬೇಕೆಂದರು.

ಚಿಂತಕಿ ಸುಲೋಚನಾಬಾಯಿ ಕಾಟಗಿ ಮಾತನಾಡಿ, ಶರಣರು ನಮ್ಮೆಲ್ಲರ ಬದುಕನ್ನು ಹಸನುಗೊಳಿಸಿ ಉತ್ತಮ ದಾರಿ ತೋರಲು ಸಹಾಯಕವಾಗುವ ವಚನದೀಪ್ತಿಗಳನ್ನು ಕೊಡುಗೆಯಾಗಿ ನೀಡಿದ್ದು,ಮಕ್ಕಳು ವಚನಗಳನ್ನು ಹೇಳುವ ರೂಢಿ ಮಾಡಿಕೊಳ್ಳಬೇಕೆಂದರು.

ಸಂಪನ್ಮೂಲ ವ್ಯಕ್ತಿ ಕೆ.ಎಸ್. ಬೇಲೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘಟನೆಗಳು ಸರಕಾರಿ ಶಾಲೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸ್ಫೂರ್ತಿದಾಯಕವಾಗಿ ಬರವಣಿಗೆ ಸಾಮಗ್ರಿಗಳನ್ನು ನೀಡಿ ಮಕ್ಕಳಿಗೆ ಅಮೂಲ್ಯಯುಕ್ತವಾದ ಹಿತನುಡಿಗಳನ್ನು ಹೇಳುತ್ತಿರುವುದು ವಿದ್ಯಾರ್ಥಿಗಳಿಗೆ ಸಂತಸವನ್ನುಂಟುಮಾಡಿದೆ ಎಂದರು.

ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯೆ ಎಸ್.ಎಸ್. ಹುರಕಡ್ಲಿ ವಹಿಸಿದ್ದರು. ವೇದಿಕೆಯ ಮೇಲೆ ಶಾಲಾ ಎಸ್‌ಡಿಎಂಸಿ ಅಧ್ಯಕ್ಷೆ ರತ್ನಾ ಪೂಜಾರ, ಸದಸ್ಯರಾದ ಲಕ್ಷ್ಮೀ ಮೊಕಾಸಿ, ಪ್ರೇಮಾ ಜಾಲವಾಡಗಿ ಉಪಸ್ಥಿತರಿದ್ದರು. ಎಸ್.ವ್ಹಿ. ಬೇವಿನಮಟ್ಟಿ ಸ್ವಾಗತಿಸಿದರು. ರವಿ ಪೂಜಾರ ನಿರೂಪಿಸಿದರು. ಜಿ.ಎಂ. ದೇವಗಿರಿ ವಂದಿಸಿದರು.

ಕರ್ನಾಟಕ ರಾಜ್ಯ ಹೊಟೇಲ್ ಒಡೆಯರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಜಿ.ಕೆ. ಶೆಟ್ಟಿಯವರನ್ನು ಆಲ್ ಇಂಡಿಯಾ ಬಂಜಾರ ಸೇವಾ ಸಂಘದ ತಾಲೂಕಾ ಕಾರ್ಯದರ್ಶಿ ಶಿವಾಜಿ ಚವ್ಹಾಣ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಗದಗಿನ ಹೋಟೆಲ್ ಉದ್ಯಮಿ ಸುಧಾಕರ ಶೆಟ್ಟಿ, ಅಶೋಕ್ ಶೆಟ್ಟಿ, ಶಂಕರ ನಾಯ್ಕ, ಜಯಶೀಲ ಶೆಟ್ಟಿ, ಕರುಣಾಕರ ಶೆಟ್ಟಿ, ಪಿ.ವಿ. ಹೆಗ್ಡೆ, ಪಲ್ಲವಿ ಹೋಟೆಲ್ ಮಾಲೀಕರಾದ ಸುಧಾಕರ ಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಮುಂಡರಗಿ ಹಾಗೂ ನರಗುಂದ ತಾಲೂಕಿನಲ್ಲಿಯ ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವೆಬ್‌ಸೈಟ್ https://karnemakaone.kar.nic.in/abcd ರಲ್ಲಿ ನಿಬಂಧನೆಗಳು ತಿಳಿಸಿರುವಂತೆ, ಅರ್ಹ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಕೊನೆಯ ದಿನ ಸೆಪ್ಟೆಂಬರ್ 19 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

ನಿಧನ ವಾರ್ತೆ

ಶೇಖಪ್ಪ ಕಿತ್ತೂರ

ಗದಗ: ತಾಲೂಕಿನ ಕೋಟುಮಚಗಿ ಗ್ರಾಮದ ಪಂಚಮಸಾಲಿ ಸಮಾಜದ ಹಿರಿಯರು, ಪ್ರಗತಿಪರ ರೈತ ಶೇಖಪ್ಪ ರುದ್ರಪ್ಪ ಕಿತ್ತೂರ(65) ಮಂಗಳವಾರ ರಾತ್ರಿ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಒರ್ವ ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ. ಮೃತರ ಅಂತ್ಯಕ್ರಿಯೆ ಬುಧವಾರ ಗ್ರಾಮದ ರುದ್ರಭೂಮಿಯಲ್ಲಿ ನೆರವೇರಿತು.

ರೋಟರಿ, ಇನ್ನರ್ ವೀಲ್ ಕ್ಲಬ್ ವತಿಯಿಂದ ಸ್ತನ್ಯಪಾನುರಿತ ಜಾಗೃತಿ ಕಾರ್ಯಕ್ರಮ

ಎದೆಹಾಲು ಶಿಶುವಿನ ಆರೋಗ್ಯಕ್ಕೆ ಪೂರಕ

■ ವಿಜಯಸಾಕ್ಷಿ ಸುದ್ದಿ, ಗದಗ

ಮಗುವಿಗೆ ಹಾಲುಣಿಸುವ ತಾಯಂದಿರಿಗೆ ಸ್ತನ ಕ್ಯಾನ್ಸರ್ ಬರುವ ಸಾಧ್ಯತೆ ಕಡಿಮೆ ಮತ್ತು ಅವರ ದೈಹಿಕ ಆರೋಗ್ಯವನ್ನು ಮರಳಿ ತರುತ್ತದೆ. ಮಗುವಿಗೆ ಉತ್ತಮ ಪೋಷಣೆಯನ್ನು ನೀಡುತ್ತದೆ ಮತ್ತು ಹಾಲುಣಿಸುವ ತಾಯಂದಿರಿಗೆ ಸ್ತನ್ಯಪಾನವು ಅನೇಕ ಪ್ರಯೋಜನಗಳನ್ನು ನೀಡುತ್ತದೆ ಎಂದು ತಜ್ಞ ವೈದ್ಯರಾದ ಡಾ. ಶಿಲ್ಪಾ ಪವಾಡಶೆಟ್ಟರ ತಾಯಂದಿರಿಗೆ ಸಲಹೆ ನೀಡಿದರು.

ಇನ್ನರ್‌ವೀಲ್ ಕ್ಲಬ್ ಹಾಗೂ ರೋಟರಿ ಕ್ಲಬ್ ಗದಗ-ಬೆಟಗೇರಿ ಸಹಯೋಗದಲ್ಲಿ ನಗರದ ದಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಸ್ತನ್ಯಪಾನದ ಮಹತ್ವದ ಕುರಿತು ಹಮ್ಮಿಕೊಂಡಿದ್ದ ಮಾಹಿತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾದ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ ಕರಿಗೌಡರ ಮಾತನಾಡಿ, ಶಿಶುಗಳು ಮತ್ತು ಚಿಕ್ಕ ಮಕ್ಕಳ ಉಳಿವು, ಪೋಷಣೆ ಮತ್ತು ಬೆಳವಣಿಗೆ ಮತ್ತು ತಾಯಂದಿರ ಆರೋಗ್ಯಕ್ಕೆ ತಾಯಂದಿರು ಶಿಶುಗಳಿಗೆ ಸ್ತನ್ಯಪಾನ ಮಾಡಿಸಬೇಕು. ಎದೆ ಹಾಲು ನವಜಾತ ಶಿಶುಗಳನ್ನು ಸೋಂಕಿನಿಂದ ರಕ್ಷಿಸುತ್ತದೆ, ರೋಗನಿರೋಧಕ ಶಕ್ತಿಯನ್ನು ಅಭಿವೃದ್ಧಿಪಡಿಸಲು ಸಹಾಯ ಮಾಡುತ್ತದೆ. ಜೀರ್ಣಕ್ರಿಯೆ ಮತ್ತು ಅತ್ಯುತ್ತಮ ಬೆಳವಣಿಗೆಗೆ ಪ್ರಯೋಜನಕಾರಿಯಾಗಿದೆ ಎಂದು ವಿವರಿಸಿದರು.

ಇನ್ನೋರ್ವ ತಜ್ಞ ವೈದ್ಯರಾದ ಡಾ. ಸನ ಮಾಲ್ದಾರ್ ಮಾತನಾಡಿ, ತಾಯಂದಿರು ಯಾವ ರೀತಿ ಪೌಷ್ಟಿಕ ಆಹಾರವನ್ನು ತೆಗೆದುಕೊಳ್ಳಬೇಕೆಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಡಾ. ಆರ್.ಬಿ. ಉಪ್ಪಿನ ಸರ್ವರನ್ನು ಸ್ವಾಗತಿಸಿದರು. ಇನ್ನರ್ ವೀಲ್ ಕ್ಲಬ್ ಹಾಗೂ ರೋಟರಿ ಕ್ಲಬ್‌ವತಿಯಿಂದ ಹಾಲುಣಿಸುವ ತಾಯಂದರಿಗೆ ಪೌಷ್ಟಿಕ ಆಹಾರವನ್ನು ವಿತರಿಸಲಾಯಿತು.

ಇನ್ನರ್‌ವೀಲ್ ಕ್ಲಬ್‌ನ ಅಧ್ಯಕ್ಷರಾದ ನಾಗರತ್ನ ಸಂದರ್ಭೋಚಿತವಾಗಿದ ಮಾತನಾಡಿದರು. ರೊ. ಶ್ರೀಧರ ಸುಲ್ತಾನಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ರೋಟರಿ ಸಂಸ್ಥೆಯ ಸದಸ್ಯರಾದ ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಶ್ರೀಧರ ಧರ್ಮಾಯತ, ಇನ್ನರ್‌ವೀಲ್ ಕ್ಲಬ್‌ನ ಸದಸ್ಯರಾದ ಮೀನಾಕ್ಷಿ ಕೊರವಣ್ಣವರ, ಸುಮಾ ಪಾಟೀಲ್, ಮಾರ್ಥ ಸಿಸ್ಟರ್ ಮುಂತಾದವರು ಉಪಸ್ಥಿತರಿದ್ದರು.

ಹೊಲಿಗೆ ಉದ್ಯಮದಲ್ಲಿ ಕೌಶಲ್ಯ ತರಬೇತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಐ.ಸಿ.ಎ.ಆರ್-ನಾರ್ಮ್ ಹೈದರಾಬಾದ ಹಾಗೂ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಇವರ ಸಹಯೋಗದಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆ ಅಡಿ ಪರಿಶಿಷ್ಟ ಜಾತಿ ಮಹಿಳೆಯರಿಗೆ ಜೀವನೋಪಾಯದ ವರ್ಧನೆಗಾಗಿ ಹೊಲಿಗೆ ಉದ್ದಿಮೆಯಲ್ಲಿ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ನಾರ್ಮ್ ಸಂಸ್ಥೆಯ ಪ್ರಧಾನ ವಿಜ್ಞಾನಿ ಡಾ. ಬಾಲಕೃಷ್ಣನ್ ನೆರವೇರಿಸಿ, ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಕುಟುಂಬಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು ಪ್ರತಿಯೊಂದು ಕುಟುಂಬಕ್ಕೂ ಈ ಯೋಜನೆಯು ಲಭ್ಯವಾಗಲಿ. ಈ ತರಬೇತಿಯ ಮುಖಾಂತರ ಮಹಿಳೆಯರು ಸ್ವ ಉದ್ಯೋಗಿಗಳಾಗಲಿ ಎಂದು ಆಶಿಸಿದರು.

ಮುಖ್ಯ ಅತಿಥಿಗಳಾಗಿ ಎಸ್.ಬಿ.ಐ-ಎ.ಎಸ್.ಎಫ್ ಆರ್‌ಸೆಟಿಯ ನಿರ್ದೇಶಕ ಡಾ.ಶಿವಕುಮಾರ ಹುಲಕೋಟಿ ಪಾಲ್ಗೊಂಡು ಮಾತನಾಡಿ, ತಮ್ಮ ಸಂಸ್ಥೆಯಿಂದ ಹಲವಾರು ಸ್ವ ಉದ್ಯೋಗದ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು ನಿರುದ್ಯೋಗ ಯುವಕ-ಯುವತಿಯರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಎ.ಎಸ್.ಎಫ್ ಮತ್ತು ಕೆವಿಕೆ ಹುಲಕೋಟಿಯ ಚೇರಮನ್ ಡಿ.ಆರ್. ಪಾಟೀಲ ಮಾತನಾಡಿ, ಪ್ರತಿ ಕುಟುಂಬದಲ್ಲಿ ಸ್ವ ಉದ್ಯೋಗಗಳು ಹಾಗೂ ಉಪಕಸುಬುಗಳೂ ಅವಶ್ಯಕವಾಗಿವೆ. ತಾವು ಮಾಡುತ್ತಿರುವ ಉದ್ಯೋಗದ ಜೊತೆಗೆ ಕುಟುಂಬಕ್ಕೆ ಸರಿ ಹೊಂದುವಂತಹ ಉಪ ಉದ್ಯೋಗವನ್ನು ಮಾಡಿ ಕುಟುಂಬದ ಆದಾಯವನ್ನು ಹೆಚ್ಚಿಸಿಕೊಳ್ಳಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಹಕಾರ ರೇಡಿಯೋದ ಜೆ.ಕೆ. ಜಮಾದಾರ, ನಿವೃತ್ತ ಡಿಡಿಪಿಐ ನಾಗರಳ್ಳಿ ಭಾಗವಹಿಸಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ನಾಗವೇಣಿ ವಡವಡಗಿ ಭಾಗವಹಿಸಿದ್ದರು. ಪ್ರಾಸ್ತಾವಿಕವಾಗಿ ಹಿರಿಯ ವಿಜ್ಞಾನಿ ಡಾ. ಸುಧಾ ಮಂಕಣಿ ಮಾತನಾಡಿದರು. ಡಾ. ವಿನಾಯಕ ನಿರಂಜನ ನಿರೂಪಿಸಿದರು. ಎನ್.ಎಚ್. ಭಂಡಿ ವಂದಿಸಿದರು. ಕಾರ್ಯಕ್ರಮದಲ್ಲಿ 20 ಜನ ಪರಿಶಿಷ್ಟ ಜಾತಿ ಮಹಿಳೆಯರಿಗೆ ಹೊಲಿಗೆ ಯಂತ್ರವನ್ನು ನೀಡಲಾಯಿತು.

ಆರೋಗ್ಯ ವೃದ್ಧಿಗೆ ಆಯುಷ್ ಪದ್ಧತಿ ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಆರೋಗ್ಯ ವೃದ್ಧಿಗೆ ಆಯುಷ್ ಪದ್

ಡಾಲಾಯತ್ ಕುಟುಂಬದಿಂದ ಮೈಸೂರ ಮಠದಲ್ಲಿ ಪ್ರಸಾದ ಭಕ್ತಿಸೇವೆ

ಶ್ರಾವಣ ಮಾಸದ ಪುರಾಣ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಮೈಸೂರ ಮಠದಲ್ಲಿ ಗಜೇಂದ್ರಗಡ-ಉಣಚಗೇರಿ ವೀರಶೈವ ಲಿಂಗಾಯತ ಸಮಾಜದಿಂದ ಆಯೋಜಿಸಿರುವ ಗುಡ್ಡಾಪೂರ ದಾನಮ್ಮದೇವಿ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಸ್ಥಳೀಯ ಪುರಸಭೆ ವಿಪಕ್ಷ ನಾಯಕ ಮುರ್ತುಜಾ ಡಾಲಾಯತ್ ಕುಟುಂಬದವರು ಪ್ರಸಾದ ಭಕ್ತಿಸೇವೆ ಕೈಗೊಂಡಿದ್ದರು.

ಪ್ರತಿ ವರ್ಷದಂತೆ ನಡೆಯುವ ಶ್ರಾವಣ ಮಾಸದ ಪ್ರಯುಕ್ತ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಪ್ರತಿದಿನ ಭಕ್ತರೊಬ್ಬರು ಮಠದಲ್ಲಿ ಸಂಜೆ ಪುರಾಣ ಕಾರ್ಯಕ್ರಮದ ಬಳಿಕ ಪ್ರಸಾದ ಭಕ್ತಿ ಸೇವೆ ಮಾಡುತ್ತಿದ್ದು, ಈ ಹಿನ್ನೆಲೆಯಲ್ಲಿ ಡಾಲಾಯತ್ ಕುಟುಂಬದ ಪ್ರಸಾದ ಭಕ್ತಿಸೇವೆ ಮೆಚ್ಚುಗೆಗೆ ಪಾತ್ರವಾಯಿತು.

ಆಚರಣೆ ಮಾತ್ರ ಭಿನ್ನ, ಭಕ್ತಿ ಮಾತ್ರ ಒಂದು ಎನ್ನುವ ತತ್ವ ಪಾಲಿಸುತ್ತಿರುವ ಡಾಲಾಯತ್ ಕುಟುಂಬವು ಮೈಸೂರ ಮಠ ಸೇರಿ ಸುತ್ತಲಿನ ಗ್ರಾಮಗಳಲ್ಲಿ ನಡೆಯುವ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಪ್ರಸಾದದ ಭಕ್ತಿಸೇವೆ ವಹಿಸಿಕೊಂಡು ಧರ್ಮ ಮೀರಿ ಭಕ್ತಿ ತೋರಿರುವುದು ಮಾದರಿಯಾಗಿದೆ.

ಸಮಾಜದ ಅಧ್ಯಕ್ಷ ಸಿದ್ದಣ್ಣ ಬಂಡಿ ಮಾತನಾಡಿ, ಪುರಾಣ ಎಂಬುದು ಭಾವೈಕ್ಯತೆಯ ಕಾರ್ಯಕ್ರಮವಾಗಿದ್ದು, ಕಳೆದ ಕೆಲ ವರ್ಷಗಳಿಂದ ಮುಸ್ಲಿಂ ಕುಟುಂಬಗಳು ಮಠದಲ್ಲಿ ನಡೆಯುವ ಶಾವ್ರಣ ಮಾಸದ ಪುರಾಣ ಕಾರ್ಯಕ್ರಮ ವೇಳೆ ಪ್ರಸಾದ ಭಕ್ತಿಸೇವೆ ಮಾಡುವ ಮೂಲಕ ಸೌರ್ಹಾದತೆಗೆ ಸಾಕ್ಷಿಯಾಗುತ್ತಿದ್ದಾರೆ ಎಂದರು

ಮುರ್ತುಜಾ ಡಾಲಾಯತ್ ಮಾತನಾಡಿ, ಭಾವೈಕ್ಯತಾ ಪಟ್ಟಣವಾಗಿರುವ ಗಜೇಂದ್ರಗಡದಲ್ಲಿ ಹಿರಿಯರು ಹಾಕಿಕೊಟ್ಟ ಮಾರ್ಗದಲ್ಲಿ ಎಲ್ಲರೂ ಕೂಡಿಕೊಂಡು ಜೀವನವನ್ನು ಸಾಗಿಸುತ್ತಿದ್ದೇವೆ ಎಂದರು.

ಮೈಸೂರ ಮಠದ ವಿಜಯಮಹಾಂತ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಈ ವೇಳೆ ಎ.ಪಿ. ಗಾಣಗೇರ, ಶಿವು ಕೋರಧ್ಯಾನಮಠ, ಎಸ್. ಎಸ್. ವಾಲಿ, ಅಪ್ಪು ಮತ್ತಿಕಟ್ಟಿ, ಬಸವರಾಜ ಚನ್ನಿ, ಮಲ್ಲಿಕಾರ್ಜುನ ಹಡಪದ ಸೇರಿ ಡಾಲಾಯತ್ ಕುಟುಂಬದ ಸದಸ್ಯರು, ಭಕ್ತಾಧಿಗಳು ಸೇರಿ ಇತರರು ಇದ್ದರು.

ಆಧ್ಯಾತ್ಮಿಕತೆಯೊಂದಿಗೆ ಬದುಕು ಸಾರ್ಥಕವಾಗಲಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶ್ರಾವಣ ಮಾಸ ದೇವರ ಆರಾಧನೆಗೆ ಪವಿತ್ರ ಮಾಸವಾಗಿದೆ. ಇದನ್ನು ಹಬ್ಬಗಳ ಹೆಬ್ಬಾಗಿಲು ಎಂದು ಸಹ ಕರೆಯಲಾಗುತ್ತದೆ. ಇಂದಿನ ಒತ್ತಡ ಜೀವನದ ಮಧ್ಯೆ ಇಂತಹ ಆಧ್ಯಾತ್ಮಿಕ ಕಾರ್ಯಗಳಲ್ಲಿ ಭಾಗಿಯಾಗಿ ಬದುಕನ್ನು ಸಾರ್ಥಕಗೊಳಿಸಿಕೊಳ್ಳಬೇಕೆಂದು ಬನ್ನಿಕೊಪ್ಪ ಬ್ರಹನ್ಮಠದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಅವರು ಬನ್ನಿಕೊಪ್ಪ ಗ್ರಾಮದ ಶ್ರೀ ದಾರುಕಾಚಾರ್ಯ ಬ್ರಹನ್ಮಠದಲ್ಲಿ ಕಸಾಪ ವತಿಯಿಂದ ಶ್ರಾವಣ ಮಾಸದ ನಿಮಿತ್ತ ಲಿಂ.ಶ್ರೀ ಡಾ. ಎಸ್.ಎಫ್. ಹಿರೇಮಠ ಅವರ ಸ್ಮರಣಾರ್ಥ ಏರ್ಪಡಿಸಲಾಗಿದ್ದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಲಿಂ.ಡಾ. ಎಸ್.ಎಫ್. ಹಿರೇಮಠ ಅವರು ತಮ್ಮ ಜೀವನದುದ್ದಕ್ಕೂ ಧಾರ್ಮಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಕಾರ್ಯಗಳಲ್ಲಿ ಭಾಗಿಯಾಗಿದ್ದರು. ಜೀವನದಲ್ಲಿ ಏನನ್ನಾದರೂ ಸಾಧಿಸೇಕೆಂದರೆ ಉಪಕಾರ ಸ್ಮರಣೆ ಮಾಡಬೇಕೆಂದು ಹೇಳಿದರು.

ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಆರ್. ಆರ್. ಗಡ್ಡದ್ದೇವರಮಠ, ಗ್ರಾ.ಪಂ ಮಾಜಿ ಅಧ್ಯಕ್ಷ ಸಿದ್ದಲಿಂಗಯ್ಯ ಹಿಂಬಾಳಿಮಠ, ಸದಸ್ಯ ಬಸನಗೌಡ ಮಾಗಡಿ, ಕಸಾಪ ಅಧ್ಯಕ್ಷ ನವೀನ ಅಳವಂಡಿ, ಉಪನ್ಯಾಸಕಿ ಸುಧಾ ಹುಚ್ಚಣ್ಣವರ, ಎಂ.ಬಿ. ಹಾವೇರಿ, ಎಂ.ಸಿ. ಮರಡೂರಮಠ, ಸುರೇಶ ಕಬ್ಬಿನ ಮುಂತಾದವರು ಉಪಸ್ಥಿತರಿದ್ದರು.

ಆಲಮಟ್ಟಿ ಜಲಾಶಯಕ್ಕೆ ಬಾಗಿನ ಅರ್ಪಣೆ ಮಾಡಿದ ಸಿಎಂ ಸಿದ್ದರಾಮಯ್ಯ, ಡಿ.ಕೆ ಶಿವಕುಮಾರ್

■ ವಿಜಯಸಾಕ್ಷಿ ಸುದ್ದಿ, ವಿಜಯಪುರ

ಆಲಮಟ್ಟಿ ಜಲಾಶಯ ಸಂಪೂರ್ಣ ಭರ್ತಿಯಾದ ಹಿನ್ನೆಲೆಯಲ್ಲಿ ಬುಧವಾರ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಬಾಗಿನ ಅರ್ಪಿಸಿದರು. ವಿಜಯಪುರ ಜಿಲ್ಲೆಯ ನಿಡಗುಂದಿ ತಾಲ್ಲೂಕಿನ ಆಲಮಟ್ಟಿ ಜಲಾಶಯಕ್ಕೆ ತೆರಳಿ ಸಿಎಂ ಸಿದ್ಧರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಕೃಷ್ಣಗೆ ಗಂಗಾಪೂಜೆ ನೆರವೇರಿಸಿದರು.

ಈ ಬಳಿಕ ಸಂಪ್ರದಾಯದಂತೆ ಆಲಮಟ್ಟಿ ಜಲಾಯಶಕ್ಕೆ ಸಿಎಂ ಸಿದ್ಧರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಬಾಗಿನ ಅರ್ಪಿಸಿದರು. ಈ ವೇಳೆಯಲ್ಲಿ ಸಚಿವ ಎಂ.ಬಿ ಪಾಟೀಲ್, ಶಿವಾನಂದ ಪಾಟೀಲ್, ಆರ್.ಬಿ ತಿಮ್ಮಾಪುರ, ಹೆಚ್.ವೈ ಮೇಟಿ, ಕಾಶಪ್ಪನವರು ಸೇರಿದಂತೆ ಹಲವು ಶಾಸಕರು ಉಪಸ್ಥಿತರಿದ್ದರು.

ರಾಜ್ಯದಲ್ಲಿಮುಂಗಾರು ಒಳನಾಡು ಮೀನುಗಾರಿಕೆಗೆ ಚೈತನ್ಯ ನೀಡಿದೆ. ಕಳೆದ ವರ್ಷದ ಬರದಿಂದ ಬರಿದಾಗಿದ್ದ ಕೆರೆಗಳು ನೀರಿನಿಂದ ತುಂಬಿವೆ. ಈ ಬಾರಿ 60 ಕೋಟಿ ಮೀನು ಉತ್ಪಾದಿಸುವ ಗುರಿಯನ್ನು ಇಲಾಖೆ ಹೊಂದಿದೆ. ಈ ನಿಟ್ಟಿನಲ್ಲಿಈಗಾಗಲೇ ಮೀನು ಮರಿಗಳ ಉತ್ಪಾದನೆಗೂ ಒತ್ತು ನೀಡಲಾಗಿದೆ.

ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

ಕಪ್ಪತ್ತಗುಡ್ಡ ಉತ್ತರ ಕರ್ನಾಟಕದ ಸಹ್ಯಾದ್ರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಪ್ಪತಗುಡ್ಡ ಅಪರೂಪದ ಆಯುರ್ವೇದ ಔಷಧಿಯ ಸಸ್ಯಗಳಿಂದ ತುಂಬಿರುವ ಖಜಾನೆ. ಕಪ್ಪತ್ತಗುಡ್ಡ ಹಚ್ಚುಹಸಿರಿನಿಂದ ಕಂಗೊಳಿಸುತ್ತಿದ್ದು, ನಾಡಿನ ಮೂಲೆಮೂಲೆಗಳಿಂದ ಪ್ರವಾಸಿಗರು ಆಗಮಿಸಿ ಕಪ್ಪತ್ತಗುಡ್ಡದ ಸೊಬಗನ್ನು ಆನಂದಿಸುತ್ತಿದ್ದಾರೆ. ಪರಿಶುದ್ಧ ಗಾಳಿಯನ್ನು ಹೊಂದಿರುವ ಕಪ್ಪತ್ತಗುಡ್ಡ ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2707ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಶ್ರೀಗಳ ಶ್ರಮದ ಫಲವಾಗಿ ಇಂದು ಕಪ್ಪತ್ತಗುಡ್ಡ ಉಳಿದಿದೆ, ವನ್ಯಜೀವಿಧಾಮವಾಗಿದೆ ಎಂದರೆ ಅತಿಶಯೋಕ್ತಿಯಲ್ಲ. ಕಪ್ಪತ್ತಗುಡ್ಡದ ಉಳಿವಿಗಾಗಿ ಜನರನ್ನು, ಪರಿಸರವಾದಿಗಳನ್ನು, ಅನೇಕ ಸಂಘ-ಸಂಸ್ಥೆಗಳನ್ನು, ಶಾಲಾ-ಕಾಲೇಜುಗಳನ್ನು ಸಂಘಟಿಸಿ ಹೋರಾಟ ಮಾಡಿದ್ದಾರೆ. ಅನೇಕ ಆಯುರ್ವೇದ ಪಂಡಿತರು ವನಸ್ಪತಿಗಾಗಿ ಕಪ್ಪತ್ತಗುಡ್ಡ ಅರಸಿ ಬರುತ್ತಾರೆ. ಅಪಾರ ಖನಿಜ ಸಂಪತ್ತನ್ನು, ಆಯುರ್ವೇದ ಸಂಪತ್ತನ್ನು, ವನ್ಯಜೀವಿಗಳನ್ನು ಹೊಂದಿರುವ ಕಪ್ಪತ್ತಗುಡ್ಡ ಪ್ರದೇಶದಲ್ಲಿ ಗಣಿಗಾರಿಕೆ ನಡೆಯದಂತೆ ಶ್ರೀಗಳು

ಮುನ್ನೆಚ್ಚರಿಕೆ ವಹಿಸುತ್ತಾ ಬಂದಿದ್ದಾರೆ. ಕಪ್ಪತ್ತಗುಡ್ಡದ ಅಭಿವೃದ್ಧಿಗೆ ಸರಕಾರ ಕ್ರಮಕೈಕೊಳ್ಳಬೇಕು ಮತ್ತು ಈ ಭಾಗದ ಸಚಿವರು, ಶಾಸಕರು, ನಾಯಕರು ವಿಶೇಷ ಆಸಕ್ತಿ ವಹಿಸಬೇಕೆಂದು ಶ್ರೀಗಳು ಆಗ್ರಹಿಸಿದರು.

ಪ್ರೊ. ಸಿ.ಎಸ್. ಅರಸನಾಳ ಉಪನ್ಯಾಸ ನೀಡಿ, ಕಪ್ಪತ್ತಗುಡ್ಡ ಸಂರಕ್ಷಣೆಯಲ್ಲಿ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಪಾತ್ರ ಹಿರಿದು. ಗಿಡಮರಗಳನ್ನು ಕಡಿಯುವುದು, ಬೆಂಕಿ ಹಚ್ಚುವುದು, ಗಣಿಗಾರಿಕೆ ಹೀಗೆ ಅನೇಕ ಸಂಕಷ್ಟಗಳ ಸಂದರ್ಭದಲ್ಲಿ ಜನರಲ್ಲಿ ಪರಿಸರ ಜಾಗೃತಿ ಮೂಡಿಸುವ ಕೆಲಸವನ್ನು ಶ್ರೀಗಳು ಮಾಡಿದ್ದಾರೆ. ಕಪ್ಪತ್ತಗುಡ್ಡ ಅಪಾರ ಗಿಡಮೂಲಿಕೆ ಮತ್ತು ಖನಿಜ ಸಂಪತ್ತನ್ನು ಒಳಗೊಂಡಿದೆ. ಮೇಲಾಗಿ ಈ ಭಾಗದ ಜನರ ಜೀವನಾಡಿ, ಸಹ್ಯಾದ್ರಿ ಎನಿಸಿದೆ. ಪೋಸ್ಕೋ ಸೇರಿದಂತೆ ಅನೇಕ ಗಣಿಗಾರಿಕೆ ಕಂಪನಿಗಳು ಕಪ್ಪತ್ತಗುಡ್ಡದ ಮೇಲೆ ಕಣ್ಣು ಹಾಕಿದಾಗ ಶ್ರೀಗಳು ರಕ್ಷಾಕವಚದಂತೆ ಕಪ್ಪತ್ತಗುಡ್ಡವನ್ನು ಉಳಿಸಿದ್ದಾರೆ.

ಮಾಜಿ ಸಚಿವ ಎಸ್.ಎಸ್. ಪಾಟೀಲ ಉಪಸ್ಥಿತರಿದ್ದರು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ಸಂಗಡಿಗರು ವಚನ ಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಖುಷಿ ಎಂ. ಲಕ್ಕುಂಡಿ, ವಚನ ಚಿಂತನೆಯನ್ನು ವರ್ಷಾ ಆರ್. ಮೇಟಿ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಗೈದ ಲಲಿತಾ ಕಾ.ಪಾಟೀಲ, ಕೊರ್ಲಹಳ್ಳಿ ಮತ್ತು ಚನ್ನಬಸಯ್ಯ ಶಿ.ಕನಕೇರಿಮಠ, ಗಿರಿಜಾದೇವಿ ಚ.ಕನಕೇರಿಮಠ ಹಾಗೂ ಕುಟುಂಬವರ್ಗದವರನ್ನು ಪೂಜ್ಯರು ಸಂಮಾನಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ ಸ್ವಾಗತಿಸಿದರು. ಐ.ಬಿ. ಬೆನಕೊಪ್ಪ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಉಮೇಶ ಪುರದ, ವಿದ್ಯಾವತಿ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿ ಚೇರಮನ್ ಐ.ಬಿ. ಬೆನಕೊಪ್ಪ, ಸಹಚೇರಮನ್ ಶಿವಾನಂದ ಹೊಂಬಳ ಉಪಸ್ಥಿತರಿದ್ದರು.

ಸ್ವತಃ ಕಪ್ಪತ್ತಗುಡ್ಡ ಪರಿಸರದಲ್ಲಿ ಮತ್ತು ಸುತ್ತಮುತ್ತಲ ಹಳ್ಳಿಗಳಲ್ಲಿ ಲಕ್ಷಾಂತರ ಗಿಡಮರಗಳನ್ನು ಬೆಳೆಸಲು ಮೂಲಕರ್ತರಾಗಿದ್ದಾರೆ. ಕಪ್ಪತ್ತಗುಡ್ಡ ಇಂದು ರಾಷ್ಟ್ರಮಟ್ಟದಲ್ಲಿ ಖ್ಯಾತಿಯನ್ನು ಪಡೆದಿದ್ದಲ್ಲದೆ, ಪರಿಶುದ್ಧ ಗಾಳಿಯನ್ನು ಹೊಂದಿದ ಪ್ರದೇಶ ಎಂಬ ಗರಿಯನ್ನು ತನ್ನದಾಗಿಸಿಕೊಂಡಿದೆ. ಪ್ರವಾಸಿಗರ ಅಚ್ಚುಮೆಚ್ಚಿನ ತಾಣವಾಗಿದೆ. ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಪರಿಸರ ಪ್ರೇಮ, ಕಾಳಜಿ, ಹೋರಾಟದ ಫಲವೇ ಕಪ್ಪತ್ತಗುಡ್ಡದ ಉಳಿವಿಗೆ ಕಾರಣ ಎಂದು ಪ್ರೊ. ಸಿ.ಎಸ್. ಅರಸನಾಳ ಸ್ಮರಿಸಿದರು.

ಡಿ.ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆ

ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರುಗಳ ಸಹಯೋಗದಲ್ಲಿ ಡಿ.ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆ ಮತ್ತು ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಕಾರ್ಯಕ್ರಮ ಜರುಗಿತು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಡಿ.ದೇವರಾಜ ಅರಸು ಮತ್ತು ಬ್ರಹ್ಮಶ್ರೀ ನಾರಾಯಣ ಗುರುಗಳ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಗೌರವ ನಮನ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಜನ್ಮದಿನಾಚರಣೆ ಅಂಗವಾಗಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕ್ಕಮ್ಮನವರ ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ ಬೋಧಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಪೋತದಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಸೇರಿದಂತೆ ಗಣ್ಯರು ಹಾಜರಿದ್ದರು.

ಚಿತ್ರಕಲಾ ಸ್ಪರ್ದೆಯಲ್ಲಿ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿ ಪ್ರೇರಣ ರಜಪೂತ್ ಚಿಣ್ಣರ ಚಿತ್ತಾರ ರಾಷ್ಟ್ರ ಮಟ್ಟದ ಚಿತ್ರಕಲಾ ಸ್ಪರ್ದೆಯಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದಿದ್ದಾಳೆ.

ಧಾರವಾಡದ ಕರ್ನಾಟಕ ಬಾಲ ವಿಕಾಸ ಅಕಾಡೆಮಿ, ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆ ಗದಗ, ಬಾಲ ಭವನ ಸೊಸೈಟಿ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಸ್ಪರ್ದೆ ನಡೆದಿತ್ತು. ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿಯನ್ನು ನೀಡಲಾಯಿತು. ಚಿಣ್ಣರ ಚಿತ್ತಾರ 2023-24 ರಾಷ್ಟ್ರ ಮಟ್ಟದ ಚಿತ್ರಕಲೋತ್ಸವ ಸ್ಪರ್ದೆಯಲ್ಲಿ

ರಾಜ್ಯ ಹಾಗೂ ರಾಷ್ಟ್ರ ಮಟ್ಟದ 2 ಸಾವಿರಕ್ಕೂ ಹೆಚ್ಚು ಸ್ಪರ್ದಾಳುಗಳು ಭಾಗವಹಿಸಿದ್ದರು.

ಇದರಲ್ಲಿ ವಿದ್ಯಾರ್ಥಿ ಪ್ರೇರಣ ಸರ್ಟಿಫಿಕೆಟ್ ಆವಾರ್ಡ್ ಪಡೆದಿದ್ದು, ವಿದಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಪ್ರಶಸ್ತಿಯನ್ನು ವಿತರಿಸಿದರು. ವಸತಿ ಶಾಲೆಯ ಚಿತ್ರಕಲಾ ಶಿಕ್ಷಕ ಆರ್.ಎಸ್ ಹಾದಿಮನಿ ಅವರಿಗೆ ದೃಶ್ಯಕಲಾ ಚಿಂತನಾಕಾರ ಪ್ರಶಸ್ತಿ ಲಭಿಸಿದೆ. ವಿಜೇತ ವಿದ್ಯಾರ್ಥಿ ಹಾಗೂ ಶಿಕ್ಷಕರನ್ನು ಮುಖ್ಯೋಪಾಧ್ಯಾಯ ರವಿ ಉದ್ಧಣ್ಣವರ ಹಾಗೂ ಸಹ ಶಿಕ್ಷಕರು ಅಭಿನಂದಿಸಿದ್ದಾರೆ.

ನೂತನ ಪೌರಾಯಕ್ತರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ ನೂತನ ಪೌರಾಯುಕ್ತರಾಗಿ ಆಗಮಿಸಿದ ಮಹೇಶ ಪೋತೆದಾರ ಅವರಿಗೆ ನಗರಸಭೆ ಗುತ್ತಿಗೆದಾರರ ಸಂಘದ ಅಧ್ಯಕ್ಷ ರಮೇಶ ಹುಣಸೀಮರದ ನೇತೃತ್ವದಲ್ಲಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗುತ್ತಿಗೆದಾರರ ಸಂಘದ ಅಧ್ಯಕ್ಷ ರಮೇಶ ಹುಣಸೀಮರದ ಮಾತನಾಡಿ, ಗುತ್ತಿಗೆದಾರರ ಹಲವಾರು ಸಮಸ್ಯೆಗಳನ್ನು ವಿವರಿಸಿ, ಹಂತ ಹಂತವಾಗಿ ಗುತ್ತಿಗೆದಾರರ ಎಲ್ಲ ಸಮಸ್ಯೆಗಳನ್ನು ಬಗೆಹರಿಸಬೇಕೆಂದು

ವಿನಂತಿಸಿದರು.

ಈ ಸಂದರ್ಭದಲ್ಲಿ ನಗರಸಭೆಯ ಕಾರ್ಯನಿರ್ವಾಹಕ ಅಭಿಯಂತರ ಎಚ್.ಎ. ಬಂಡಿವಡ್ಡರ, ಗುತ್ತಿಗೆದಾರರಾದ ಎಂ.ಸಿ. ಶೇಖ, ಜಿ.ಎಸ್. ಹಿರೇಮಠ, ಎಸ್.ಎಚ್. ಹೂಲಿ, ಎ.ಬಿ. ಕಟಗಿ, ಬಿ.ಪಿ. ಕಲ್ಮನಿ, ಆರ್.ಎಮ್. ತಡಹಾಳ, ದತ್ತು ಗಾಯಕವಾಡ, ಎಮ್.ಎಸ್. ಮುಳಗುಂದ, ಬಿ.ಎಮ್. ಗುಡಸಾಲಿ, ಎಸ್.ಎಮ್. ಚಳಗೇರಿ, ಪಿ.ಎಮ್. ಗುಂತಕಲ್, ಮಂಜುನಾಥ ಬೆಳಧಡಿ, ಎಲ್.ಬಿ. ದೊಡ್ಡಮನಿ, ಎಸ್.ಎಸ್. ಮುಳಗುಂದ, ಎಸ್.ವಿ. ಜಾಲಿಹಾಳ, ಶರಣಪ್ಪ ಚಳಗೇರಿ, ಪಿ.ಐ. ಪಿಂಡಕೊರ, ಎಮ್.ಎಚ್. ತೋರಗಲ್, ಕೆ.ಎಮ್. ಬಳ್ಳಾರಿ, ಬಸವರಾಜ ಉಮಚಗಿ ಮುಂತಾದವರು ಉಪಸ್ಥಿತರಿದ್ದರು.

ತುಂಗಾಭದ್ರಾ ನದಿಯಿಂದ ಲಕ್ಕುಂಡಿ ಕೆರೆ ತುಂಬಿಸಲು ತಾರತಮ್ಯ

ಕೆರೆ ತುಂಬಿಸದಿದ್ದರೆ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ತುಂಗಾಭದ್ರಾ ನದಿಯಿಂದ ಹುಲಿಗುಡ್ಡ ಏತ ನೀರಾವರಿ ಯೋಜನೆಯಿಂದ ಕಾಲುವೆ ಮೂಲಕ ಹರಿಸುತ್ತಿರುವ